# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ

EDITOR: MAHESHWARI BHIMASHI BHARAMANNAVARA

BELAGAVI VARTE

KANNADA DAILY MORNING BELAGAVI

G-mail: belagavivarte1@gmail.com

epaper. belagavivarte.com

Regd No : G2/PMG/KA/NK/BM/157/26-28

Volume: 01 Issue : 93 MONDAY 15-06-2026 PRGI No : KNKAN/26/A0962 Pages:4 Rs.2.00 M: 9742418836


## ಗ್ಯಾರಂಟಿಗಳಿಗೆ ಹೊಸ ಅರ್ಜಿ: ಫಲಾನುಭವಿಗಳ ಕತ್ತರಿಗೆ ಸಂಚು: ಪ್ರತಿಪಕ್ಷ ನಾಯಕ ಆರ್. ಅಶೋಕ್





ಬೆಂಗಳೂರು: ಗ್ಯಾರಂಟಿಗಳಿಗೆ ಹೊಸ ಅರ್ಜಿ ಸಲ್ಲಿಕೆಯ ಹಿಂದೆ ಇರುವುದು ಅರ್ಹತೆಯ ಅಳತೆ ಗೋಲು ಅಲ್ಲ. ಫಲಾನುಭವಿಗಳಿಗೆ ಕತ್ತರಿ ಹಾಕುವ ಒಳ ಸಂಚು ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ಟೀಕಿಸಿದ್ದಾರೆ.

ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಟ್ವೀಟ್ ಮಾಡಿರುವ ಅವರು, ಗೃಹಲಕ್ಷ್ಮಿಗೆ ಕಷ್ಟ, ಗೃಹಜ್ಯೋತಿಗೆ ಕತ್ತಲು. ಅನರ್ಹರ ನೆಪದಲ್ಲಿ ಬಡವರ ಹಕ್ಕು ಕಬಳಿಸಲು ಬಂದಿದೆ ಹೊಸ ಅರ್ಜಿ ಎಂಬ ಹೊಸ ಕತ್ತರಿ ಎಂದು ವ್ಯಂಗ್ಯವಾಡಿದ್ದಾರೆ.

ಸತ್ತವರ ಹೆಸರನ್ನು ಫಲಾನುಭವಿಗಳ ಪಟ್ಟಿಯಿಂದ ತೆಗೆಯಲು ಇಡೀ ಗ್ಯಾರಂಟಿ ಯೋಜನೆಗೆ ಹೊಸ ಅರ್ಜಿ ಸಲ್ಲಿಸಬೇಕೆ ಎಂದು ಪ್ರಶ್ನಿಸಿರುವ ಅವರು, ಇದು ಯಾವ ಸೀಮೆಯ ತೊಘಲಕ್ ದರ್ಬಾರ್ ಸ್ವಾಮಿ ಎಂದು ಹರಿಹಾಯ್ದಿದ್ದಾರೆ.

ಅನರ್ಹರನ್ನು ತಡೆಯುವ ನೆಪದಲ್ಲಿ ಈಗಾಗಲೇ ಸೌಲಭ್ಯ ಪಡೆಯುತ್ತಿರುವ ಲಕ್ಷಾಂತರ ಸ್ವಾಭಿಮಾನಿ ತಾಯಂದಿರುವ ಮತ್ತು ಜನಸಾಮಾನ್ಯರನ್ನು ಮತ್ತೆ ಕಚೇರಿಗಳ ಮುಂದೆ, ಸೈಬರ್ ಸೆಂಟರ್‌ಗಳ ಮುಂದೆ ಸಾಲಿನಲ್ಲಿ ನಿಲ್ಲಿಸಲು ನಿಮಗೆ ನಾಚಿಕೆಯಾಗುವುದಿಲ್ಲವೇ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿರುದ್ಧ ಕಿಡಿಕಾರಿದ್ದಾರೆ.

ನಿಮ್ಮ ಸರ್ಕಾರದ ಕಮೀಷನ್ ದಂಧೆ ಹಾಗೂ ದುರಾಡಳಿತದಿಂದ ರಾಜ್ಯದ ಬೊಕ್ಕಸ ಸಂಪೂರ್ಣ ದಿವಾಳಿಯಾಗಿದೆ. ಗ್ಯಾರಂಟಿಗೆ ನೀಡಲು ಹಣವಿಲ್ಲದೆ ಈಗ ಜನರಿಗೆ ತೊಂದರೆ ಕೊಟ್ಟು ಫಲಾನುಭವಿಗಳ ಸಂಖ್ಯೆಯನ್ನು ಕಡಿತಗೊಳಿಸುವುದೇ ನಿಮ್ಮ ಅಸಲಿ ಅಜೆಂಡಾ ಎನ್ನುವ ಸತ್ಯವನ್ನು ಅರಿಯುದಷ್ಟು ಅಮಾಯಕರಲ್ಲ ಸ್ವಾಭಿಮಾನಿ ಕನ್ನಡಿಗರು. ಮನೆಗೆ ತಲುಪಲಿದೆ ನಮೂನೆ ಎಂಬ ನಿಮ್ಮ ಹೊಸ ನಾಟಕ ಯಾರಿಗಾಗಿ ಎಂದು ಪ್ರಶ್ನಿಸಿದ್ದಾರೆ.

ಬಡವರ, ಶೋಷಿತರ ಹಕ್ಕಿನ ದುಡ್ಡಿಗೆ ಕತ್ತರಿ ಹಾಕಲು ಹೊರಟಿರುವ ನಿಮ್ಮ ಜನ ವಿರೋಧಿ ನೀತಿಯನ್ನು ಸ್ವಾಭಿಮಾನಿ ಕನ್ನಡಿಗರು ಸಹಿಸುವುದಿಲ್ಲ. ಗ್ಯಾರಂಟಿ ಯೋಜನೆಗಳ ಹೆಸರಿನಲ್ಲಿ ಜನರನ್ನು ಸಾಲಿನಲ್ಲಿ ನಿಲ್ಲಿಸಿ ಕಾಟ ಕೊಡುವುದನ್ನು ತಕ್ಷಣ ನಿಲ್ಲಿಸಿ. ಬೊಕ್ಕಸದ ದುಡ್ಡನ್ನು ಲೂಟಿ ಹೊಡೆಯುವುದನ್ನು ಬಿಟ್ಟು ಜನರಿಗೆ ಕೊಟ್ಟ ಮಾತಿನಂತೆ ಗ್ಯಾರಂಟಿ ಸೌಲಭ್ಯಗಳನ್ನು ತಲುಪಿಸಿ. ಇಲ್ಲದಿದ್ದರೆ ಕರ್ನಾಟಕದ ಜನತೆ ಕಾಂಗ್ರೆಸ್ ಪಕ್ಷವನ್ನು ಗಂಟು ಮೂಟೆ ಕಟ್ಟಿಸಿ ಶಾಶ್ವತವಾಗಿ ಮನೆಗೆ ಕಳುಹಿಸುವುದು ಗ್ಯಾರಂಟಿ ಎಂದು ಅಶೋಕ್ ಹೇಳಿದ್ದಾರೆ.

## ಭಾರತ ವಿಶ್ವದ ವೇಗದ ಆರ್ಥಿಕ ಶಕ್ತಿ: ನಿರ್ಮಲಾ



ಬೆಂಗಳೂರು: "ತ್ರೈಮಾಸಿಕದಿಂದ ತ್ರೈಮಾಸಿಕಕ್ಕೆ, ವರ್ಷದಿಂದ ವರ್ಷಕ್ಕೆ ಭಾರತವು ಜಾಗತಿಕ ಮಟ್ಟದಲ್ಲಿ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಪ್ರಮುಖ ಆರ್ಥಿಕತೆಯಾಗಿ ಮುನ್ನಡೆಯುತ್ತಿದೆ" ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ತಿಳಿಸಿದ್ದಾರೆ.

ನಗರದಲ್ಲಿ ಭಾನುವಾರ ನಡೆದ ಬಿಜೆಪಿಯ 'ವಿಕಸಿತ ಭಾರತ' ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡುತ್ತಿದ್ದರು.ಕಳೆದ ಹಣಕಾಸು ವರ್ಷದಲ್ಲಿ (2025–26) ಭಾರತದ ಒಟ್ಟು ಆಂತರಿಕ ಉತ್ಪಾದನೆ (ಜಿಡಿಪಿ) ಪ್ರಗತಿ ದರವು ಶೇ. 7.7 ಕ್ಕೆ ಏರಿಕೆಯಾಗಿದೆ. ಇದು ಅದರ ಹಿಂದಿನ ವರ್ಷ ದಾಖಲಾಗಿದ್ದ ಶೇ. 7.1 ಕ್ಕಿಂತ ಗಣನೀಯ ಪ್ರಮಾಣದ ಪ್ರಗತಿಯನ್ನು ತೋರಿಸುತ್ತದೆ. ಇನ್ನು ಪ್ರಸಕ್ತ ಸಾಲಿನ ಜನವರಿ–ಮಾರ್ಚ್ ಅವಧಿಯ ನಾಲ್ಕನೇ ತ್ರೈಮಾಸಿಕದಲ್ಲಿ ಆರ್ಥಿಕತೆಯು ಶೇ. 7.8 ರಷ್ಟು ಪ್ರಗತಿ ಸಾಧಿಸಿದೆ. ಬ್ಲೂಮ್‌ಬರ್ಗ್‌ನಂತಹ ಜಾಗತಿಕ ಆರ್ಥಿಕ ತಜ್ಞರು ಅಂದಾಜಿಸಿದ್ದ ಶೇ. 7.3 ರ ಮುನ್ಸೂಚನೆಗಿಂತಲೂ ಭಾರತದ ನೈಜ ಸಾಧನೆ ಹೆಚ್ಚಾಗಿರುವುದು ದೇಶದ ಸುಸ್ಥಿರ ಆರ್ಥಿಕತೆಗೆ ಹಿಡಿದ ಕೈಗನ್ನಡಿಯಾಗಿದೆ ಎಂದು ಸಚಿವರು ವಿಶ್ವಾಸ ವ್ಯಕ್ತಪಡಿಸಿದರು.

ಪಶ್ಚಿಮ ಏಷ್ಯಾ (ಮಧ್ಯಪ್ರಾಚ್ಯ) ಪ್ರಾಂತ್ಯದಲ್ಲಿ ಇರಾನ್ ಸಂಘರ್ಷ ಸೇರಿದಂತೆ ಜಾಗತಿಕ ಭೌಗೋಳಿಕ ರಾಜಕೀಯ ಉದ್ವಿಗ್ನತೆ ಹೆಚ್ಚಾಗುತ್ತಿದೆ. ಕಚ್ಚಾ ತೈಲದ ಬೆಲೆ ಏರಿಕೆ ಹಾಗೂ ಹಾರ್ಮುಜ್ ಜಲಸಂಧಿಯ ಮೂಲಕ ನಡೆಯುವ ವ್ಯಾಪಾರ ವಹಿವಾಟಿನ ಮೇಲಿನ ಒತ್ತಡಗಳು ಭಾರತದ ಆರ್ಥಿಕತೆಯ ಮೇಲೂ ಪ್ರಭಾವ ಬೀರುವ ಸಾಧ್ಯತೆಗಳಿವೆ. ಇಂತಹ ಸವಾಲುಗಳ ನಡುವೆಯೂ ಭಾರತ ತನ್ನ ಆರ್ಥಿಕ ಸುಸ್ಥಿರತೆಯನ್ನು ಕಾಯ್ದುಕೊಂಡಿದೆ.

ಹೆಚ್ಚುತ್ತಿರುವ ಜಾಗತಿಕ ತೈಲ ಬೆಲೆ ಹಾಗೂ ಹಣದುಬ್ಬರದ ಭೀತಿಯ ಹಿನ್ನೆಲೆಯಲ್ಲಿ ಭಾರತೀಯ ರಿಸರ್ವ್ ಬ್ಯಾಂಕ್ (ಆರ್‌ಬಿಐ) ಮುಂದಿನ ಆರ್ಥಿಕ ವರ್ಷದ ಬೆಳವಣಿಗೆಯ ದರವನ್ನು ಶೇ. 6.6 ಕ್ಕೆ ಅಂದಾಜಿಸಿದೆ. ಆದಾಗ್ಯೂ, ದೇಶದಲ್ಲಿ ಮ್ಯಾಕ್ರೋ–ಎಕನಾಮಿಕ್ ಸ್ಥಿರತೆ ಮತ್ತು ಪೂರೈಕೆ ವ್ಯವಸ್ಥೆಯ ಸುಧಾರಣೆಗಳು ಮುಂದುವರಿದರೆ, 2028ರ ವೇಳೆಗೆ ಭಾರತವು ಮತ್ತೆ ಶೇ. 7 ಕ್ಕಿಂತ ಹೆಚ್ಚಿನ ಪ್ರಗತಿ ದರಕ್ಕೆ ಮರಳಲಿದೆ ಎಂದು ಮುಖ್ಯ ಆರ್ಥಿಕ ಸಲಹೆಗಾರ ವಿ. ಅನಂತ ನಾಗೇಶ್ವರನ್ ತಿಳಿಸಿದ್ದಾರೆ.

## ದೇಶದಲ್ಲಿ ಅತ್ಯಂತ ದೊಡ್ಡ ಆಸ್ಪತ್ರೆಯಾಗಿ ಕೆಎಲ್‌ಇ ಆಸ್ಪತ್ರೆ ಬೆಳೆದು ನಿಂತಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಂಡು ಆರೋಗ್ಯವಂತರಾಗಿ



ಗೋಕಾಕ: ಶಿಬಿರವನ್ನು ಉದ್ಘಾಟಿಸುತ್ತಿರುವ ಗಣ್ಯರು.

**ಬೆಳಗಾವಿ ವಾರ್ತೆ ಗೋಕಾಕ:** ದೇಶದಲ್ಲಿ ಅತ್ಯಂತ ದೊಡ್ಡ ಆಸ್ಪತ್ರೆಯಾಗಿ ಕೆಎಲ್‌ಇ ಆಸ್ಪತ್ರೆ ಬೆಳೆದು ನಿಂತಿದ್ದು, ಸಾರ್ವಜನಿಕರು ಇದರ ಸದು ಪಯೋಗ ಪಡೆದುಕೊಂಡು ಆರೋಗ್ಯವ ಂತರಾಗಿ ಎಂದು ಕೆಎಲ್‌ಇ ಸಂಸ್ಥೆಯ ನಿರ್ದೇಶಕ ಜಯಾನಂದ ಮುನ್ನವಳ್ಳಿ ಹೇಳಿದರು. ಶನಿವಾರದಂದು ಘೋಡ ಗೇರಿ ಗ್ರಾಮದ ಶ್ರೀ ಶಿವಾನಂದ ಮಠದಲ್ಲಿ ಕೆಎಲ್‌ಇ ಸಂಸ್ಥೆಯ ಆಸ್ಪತ್ರೆ ಐ.ಸಿ.ಯು ಗೋಕಾಕ ಹಾಗೂ ಪರಮಪೂಜ್ಯ ಶ್ರೀ ಮಲ್ಲಯ್ಯ ಮಹಾಸ್ವಾಮಿಗಳು ಘೋಡಗೇ ರಿ ಇವರ ಸಂಯುಕ್ತಾಶ್ರಯದಲ್ಲಿ ಉಚಿತ ಆರೋಗ್ಯ ತಪಾಸಣೆ ಹಾಗೂ ಔಷಧಿ ವಿತರಣೆ ಶಿಬಿರದ ಅಧ್ಯಕ್ಷತೆಯನ್ನು ವಹಿಸಿ ಅವರು ಮಾತನಾಡಿದರು. ಆರೋಗ್ಯ ಸೇವೆ ಇಂದು ದೇಶದಲ್ಲಿ ದೊಡ್ಡ ವ್ಯಾಪಾರ ವಾಗಿದ್ದು, ಇದು ದುಃಖ ದ ಸಂಗತಿಯಾಗಿದೆ. ಇಂತಹ ಸಂದರ್ಭ ದಲ್ಲಿ ಕೆಎಲ್‌ಇ ಆಸ್ಪತ್ರೆ ಬಡವರ ಪರವಾಗಿ ನಿಂತು ಕಾರ್ಯನಿರ್ವಹಿಸುತ್ತಿದ್ದು, ಸಾರ್ವ ಜನಿಕರು ಇದರ ಸದುಪಯೋಗ ಪಡೆಸಿ ಕೊಳ್ಳಬೇಕು. ಕೆಎಲ್‌ಇ ಸಂಸ್ಥೆ ಹಣ ಮಾಡಲು ಹುಟ್ಟಿಲ್ಲ, ಜನರ ಸೇವೆ ಮಾಡಲು ಹುಟ್ಟಿದೆ. ಆಧುನಿಕ ಯುಗದಲ್ಲಿ ಪರಿಸರ ಹಾಳಾಗುತ್ತಿದ್ದು, ಇದರ ಬಗ್ಗೆ ಸಾರ್ವಜನಿಕರು ಕಾಳಜಿ ವಹಿಸಿ ಗಿಡ ಮರಗಳನ್ನು ಬೆಳೆಸಿ ಪರಿಸರವನ್ನು ಸಂರ ಕ್ಷಿಸಬೇಕು ಅಂದಾಗ ಆರೋಗ್ಯವಂತ ಜೀವನ ನಡೆಸಲು ಸಾಧ್ಯ ಎಂದು ಹೇಳಿದರು. ಕಾರ್ಯಕ್ರಮದ ಸಾನಿಧ್ಯವ ನ್ನು ವಹಿಸಿ ಮಾತನಾಡಿದ ಶ್ರೀ ಮಲ್ಲಯ್ಯ ಮಹಾಸ್ವಾ ಮಿಗಳು ಇಂದು ಆರೋಗ್ಯ ಸೇವೆಗಳು ದುಭಾರಿ ಆಗಿದ್ದು, ಇಂತಹ ಉಚಿತ ಆರೋಗ್ಯ ಶಿಬಿರಗಳ ಸದುಪ ಯೋಗ ಪಡೆದುಕೊಂಡು ಆರೋಗ್ಯವಂ ತರಾಗಬೇಕು ಕೆಎಲ್‌ಇ ಗೋಕಾಕ ಆಸ್ಪತ್ರೆಯಲ್ಲಿ ಅನುಭವಿ ವೈದ್ಯರ ತಂಡ ಕಾರ್ಯನಿರ್ವ ಹಿಸುತ್ತಿದ್ದಾರೆ ಇವರ ಸೇವೆಯನ್ನು ಈ ಭಾಗದ ಎಲ್ಲರೂ ಪಡೆದುಕೊಳ್ಳಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಡಾ.ಧರೆಪ್ಪ ಚೌಗಲಾ, ಡಾ.ಶುಭಂ ಹುಕ್ಕೇರಿ, ಡಾ.ಅರುಣ ವಣ್ಣೂರ, ಡಾ.ಜ್ಯೋತಿ ಚೌಗಲಾ, ಡಾ.ಅಂಜನಾಬಾಯಿ ಓಸೇಕರ, ರೋಟರಿ ಸಂಸ್ಥೆಯ ಸೋಮಶೇಖರ್ ಮಗದುಮ್ಮ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಯಲ್ಲಮ್ಮನ ದರ್ಶನ ಪಡೆದ ಬೆಳಗಾವಿ ಉತ್ತರ ವಲಯದ ಆಯ್‌ಜಿಪಿ ಡಾ॥ ಸಂದೀಪ ಪಾಟೀಲ



ಯಲ್ಲಮ್ಮನ ದರ್ಶನ ಪಡೆದ ಬೆಳಗಾವಿ ಉತ್ತರ ವಲಯದ ಆಯ್‌ಜಿಪಿ ಡಾ, ಸಂಧೀಪ ಪಾಟಿಲ ಅವರನ್ನು ಪ್ರಾಧಿಕಾರದ ಸದಸ್ಯ ಶಿದ್ಧನಗೌಡ ಗೂಡರಾಶಿ ಶಾಲೂಹೊದಿಸಿ ಸತ್ಕರಿಸಿದರು.

**ಬೆಳಗಾವಿ ವಾರ್ತೆ ಉಗರಗೋಳ:** ಶ್ರೀಕ್ಷೇತ್ರ ಯಲ್ಲಮ್ಮನ ಗುಡ್ಡಕ್ಕೆ ಶನಿವಾರ ರಂದು ಬೆಳಗಾವಿ ಉತ್ತರ ವಲಯದ ಆಯ್‌ಜಿಪಿ ಡಾ, ಸಂಧೀಪ ಪಾಟಿಲ ಭೇಟಿ ನೀಡಿ ಶ್ರೀದೇವಿಯ ದರ್ಶನ ಆಶೀರ್ವಾದ ಪಡೆದುಕೊಂಡರು.

ಯಲ್ಲಮ್ಮ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ ಶಿದ್ಧನಗೌಡ ಗೂಡರಾಶಿ. ಡಾ, ಸಂಧೀಪ ಪಾಟೀಲ ಅವರನ್ನು ಶಾಲೂಹೊದಿಸಿ ಸತ್ಕರಿಸಿದರು.

ದೇವಸ್ಥಾನ ಅಭಿವೃದ್ದಿ ಪ್ರಾಧಿಕಾರದ ಸದಸ್ಯ ಶಿದ್ಧನಗೌಡ ಗೂಡರಾಶಿ. ಬೈಲ್‌ಹೊಂಗಲ್ ಡಿವಾಯ್‌ಎಸ್‌ಪಿ ವೀರಯ್ಯ ಹಿರೇಮಠ, ಸವದತ್ತಿ ಸಿಪಿಆಯ್ ಸುರೇಶ ಬಂಡೆಗೊಂಬಳ, ಪಿಎಸ್‌ಆಯ್ ಕಲ್ಮೇಶ ಬನ್ನೂರ, ಆರ್ ಎಸ್ ಸವದತ್ತಿ, ಎಸ್ ಆರ್ ಈಟಿ, ಸಿ ಎನ್ ಕುಲಕರ್ಣಿ, ಪರಸನಗೌಡ ರೆಣ್ಕೀಗೌಡ್ರ, ಈಶ್ವರ ಕಗದಾಳ, ಪಂಡಿತ ಪಿ ರಾಜಶೇಖರಯ್ಯ, ಎಎಸ್‌ಆಯ್ ಪುಂಡಲೀಕ ಫರೀಟ್, ಪಿಸಿ ಬಾಳೇಶ ಶೇಟ್ಟೆಪ್ಪನವರ ಹಾಗೂ ದೇವಸ್ಥಾನ ಸಿಬ್ಬಂದಿ ಇದ್ದರು.

## 'ವಿದ್ಯುತ ಕ್ಷೇತ್ರದಲ್ಲಿ ಖಾಸಗಿ ಸಂಸ್ಥೆಗಳಿಗೆ ಅನುಮತಿ ನೀಡಿದಲ್ಲಿ ರಾಜ್ಯದ ಜನತೆ, ರೈತರು ಮತ್ತು ಗ್ರಾಹಕರಿಗೆ ಸೌಲಭ್ಯದಿಂದ ವಂಚಿತರಾಗಿ ತೊಂದರೆಗೀಡುತ್ತಾರೆ'

**ಬೆಳಗಾವಿ ವಾರ್ತೆ ಮೂಡಲಗಿ:** 'ವಿದ್ಯುತ ಕ್ಷೇತ್ರದಲ್ಲಿ ಖಾಸಗಿ ಸಂಸ್ಥೆಗಳಿಗೆ ಅನುಮತಿ ನೀಡಿ ದಲ್ಲಿ ರಾಜ್ಯದ ಜನತೆ, ರೈತರು ಮತ್ತು ಗ್ರಾಹಕರಿಗೆ ಸೌಲಭ್ಯದಿಂದ ವಂಚಿತ ರಾಗಿ ತೊಂದರೆಗೀಡುತ್ತಾರೆ' ಎಂದು ಹೆಸ್ಕಾಂ ಮೂಡಲಗಿ ವಿಭಾಗೀ ಯ ಸಹಾಯಕ ಕಾರ್ಯ ನಿರ್ವಾಹಕ ಅಧಿ ಕಾರಿ ಎಂ.ಎಸ್. ನಾಗನ್ನವರ ಹೇಳಿದರು.

ಇಲ್ಲಿಯ ಹೆಸ್ಕಾ ಕಚೇರಿಯ ಬಳಿಯಲ್ಲಿ ಹೆಸ್ಕಾಂ ನೌಕರರ ಸಂಘದಿಂದ ಜರುಗಿದ ದ್ವಾರ ಸಭೆಯಲ್ಲಿ ಮಾತನಾಡಿದ ಅವರು ಈಗಾಗಲೇ ಟಾಟಾ ಪಾವರ ಕಂಪನಿಯು ರಾಜ್ಯದಲ್ಲಿ ವಿತ್ಯುತ್ ವಿತರಣೆಗೆ ಕೆಇಆರ್‌ಸಿಗೆ ಅರ್ಜಿ ಹಾಕಿದ್ದು, ಅಂಥ ಅರ್ಜಿಯನ್ನು ತಿರಸ್ಕರಿಸಿಬೇಕು ಎಂದು ಒತ್ತಾಯಿಸಿದ್ದಾರೆ.

ಹೆಸ್ಕಾಂ ಘಟಪ್ರಭಾ ವಿಭಾಗದ ನೌಕರರ ಸಂಘದ ಪ್ರತಿನಿಧಿ ಆರ್.ಡಿ. ಪಿಡಾಯಿ ಮಾತನಾಡಿ 'ಸಾವಿರಾರು ಕೋಟಿ ವಿದ್ಯುತ್ ವಿತರಣಾ ಜಾಲ, ಉಪಕೇಂದ್ರ, ಬೃಹತ್ ಸೌಕರ್ಯಗಳನ್ನು ಹೊಂದಿರುವ ವಿದ್ಯುತ್ ಜಾಲವು ಸಾರ್ವಜನಿಕರ ಆಸ್ತಿಯಾಗಿದೆ. ಈಗಿರುವ ವ್ಯವಸ್ಥೆಯು ಗ್ರಾಹಕರಿಗೆ ತಡೆರಹಿತ, ಸಮರ್ಪಕವಾಗಿ ವಿದ್ಯುತ್ ವಿತರಿಸುತ್ತಲಿದೆ. ಸರ್ಕಾರವು ಈಗ ನೀಡುತ್ತಿರುವ ಉಚಿತ ಸೌಲಭ್ಯಗಳು ನಿಲ್ಲಿಸಿ ತಮಗೆ ತೋಚಿದ ದರಗಳನ್ನು ನಿರ್ಧರಿಸಿ ಜನರಿಗೆ ವಿದ್ಯುತ್ ಪಡೆಯುವುದು ಭಾರವಾಗು ತ್ತದೆ. ಟಾಟಾ ಕಂಪನಿಗೆ ಯಾವುದೇ ಕಾರಣಕ್ಕೂ ವಿದ್ಯುತ್ ಜಾಲದ ಜವಾಬ್ದಾರಿಯನ್ನು ನೀಡಬಾರದು ಎಂದು ಒತ್ತಾಯಿಸಿದರು.

ಈ ಸಂಬಂಧವಾಗಿ ಎಲ್ಲರೂ ಕೆಇಆರ್‌ಸಿಗೆ ಇದೇ ಜೂ.23ರ ಒಳಗಾಗಿ ತಕರಾರು ಅರ್ಜಿಯನ್ನು ಹಾಕಬೇಕು ಎಂದು ಪಿಡಾಯಿ ಅವರು ತಿಳಿಸಿದರು. ಈ ಸಂದರ್ಭದಲ್ಲಿ ಕೃಷ್ಣಾ ದಿವಟ ಗಿ, ಎಂ.ಎ. ಹಿರೇಮಠ ಮಾತನಾಡಿ ದರು.



ಮೂಡಲಗಿ : ಇಲ್ಲಿಯ ಹೆಸ್ಕಾ ಕಚೇರಿಯ ಬಳಿಯಲ್ಲಿ ಹೆಸ್ಕಾಂ ನೌಕರರ ಸಂಘದಿಂದ ಜರುಗಿದ ದ್ವಾರ ಸಭೆಯಲ್ಲಿ ಹೆಸ್ಕಾಂ ಮೂಡಲಗಿ ವಿಭಾಗೀಯ ಸಹಾಯಕ ಕಾರ್ಯನಿರ್ವಾಹಕ ಅಧಿಕಾರಿ ಎಂ.ಎಸ್. ನಾಗನ್ನವರ ಮಾತನಾಡಿದರು

ಪ್ರಾಥಮಿಕ ಸಮಿತಿ ಅಧ್ಯಕ್ಷ ವಿ.ವೈ. ಭಜಂತರಿ, ಕಾರ್ಯದರ್ಶಿ ಜ್ಞಾನೇಶ ಗದಾಡಿ, ನಾಗೇಶ ಬಂಗೆನ್ನವರ, ಶಾಖಾಧಿಕಾರಿಗಳಾದ ಪಿ.ವೈ. ಯಡಹಳ್ಳಿ, ಎಸ್.ಎಂ. ಮುಧೋಳ, ಚೌಹಾನ ಬಾಹುಬಲಿ, ಕುರಣಿ, ಶಿವಾ ನಂದ, ಕಂಚಗಾರಟ್ಟಿ, ಆರ್.ಬಿ. ಬಾಗೇವಾಡಿ ಹಾಗೂ ಕೆಪಿಟಿಸಿಎಲ್ ಮತ್ತು ಹೆಸ್ಕಾಂದ ಸಿಬ್ಬಂದಿಯವರು ಭಾಗವಹಿಸಿದ್ದರು.

## ಗೃಹಲಕ್ಷ್ಮೀ, ಗೃಹಜ್ಯೋತಿ ಯೋಜನೆಗೆ ಮರು ಅರ್ಜಿ ಸಲ್ಲಿಕೆ ಮಾಹಿತಿ

**ಬೆಳಗಾವಿ ವಾರ್ತೆ ಬೆಂಗಳೂರು:** ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆ ಯೋಜನೆಯಾದ ಗೃಹಲಕ್ಷ್ಮಿ ಹಾಗೂ ಗೃಹಜ್ಯೋತಿ ಯೋಜನೆಗಳಿಗೆ ಸೇವಾ ಸಿಂಧು ಮೂಲಕ ಮರು ಅರ್ಜಿ ಸಲ್ಲಿಸಬಹುದಾಗಿದೆ.

ಆಧಾರ ಸಂಖ್ಯೆ ಹಾಗೂ ಮೊಬೈಲ್ ಸಂಖ್ಯೆಯ ನೆರವಿನಿಂದ ನೋಂದಣಿ ಮಾಡಬಹುದು. ಗ್ರಾಮ ಒನ್, ಬೆಂಗಳೂರು ಒನ್, ಕರ್ನಾಟಕ ಒನ್ ಹಾಗೂ ನಾಡ ಕಚೇರಿಗಳಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

ಆಧಾರ್ ಕಾರ್ಡ್, ಆಧಾರ್ ಜೋಡಣೆಯಾಗಿರುವ ಬ್ಯಾಂಕ್ ಪಾಸ್‌ಬುಕ್, ರೇಷನ್ ಕಾರ್ಡ್ (ಪಡಿತರ ಚೀಟಿ) ಸರ್ಕಾರದಿಂದ ಅಧಿಕೃತ ಮಾರ್ಗಸೂಚಿ ಪ್ರಕಟವಾದ ಬಳಿಕ ಮರು ನೋಂದಣಿ ಪ್ರಕ್ರಿಯೆ, ಸ್ಮಾರ್ಟ್ ಕಾರ್ಡ್ ವಿತರಣೆ ಹಾಗೂ ಪರಿಷ್ಕೃತ ನಿಯಮಗಳ ಕುರಿತು ಹೆಚ್ಚಿನ ಮಾಹಿತಿ ಲಭ್ಯವಾಗಲಿದೆ. ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಗೃಹಲಕ್ಷ್ಮೀ ಹಾಗೂ ಗೃಹಜ್ಯೋತಿ ಯೋಜನೆಗಳನ್ನು ಮತ್ತೊಮ್ಮೆ ಪರಿಷ್ಕರಿಸಲು ಸರ್ಕಾರ ಮುಂದಾಗಿದ್ದು, ಫಲಾನುಭವಿಗಳು ಹೊಸದಾಗಿ ಅರ್ಜಿ ಸಲ್ಲಿಸುವ ವ್ಯವಸ್ಥೆ ಜಾರಿಗೆ ಬರುವ ಸಾಧ್ಯತೆ ಇದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಿನ್ನೆ ತಿಳಿಸಿದ್ದರು.

ಯೋಜನೆಗಳನ್ನು ಯಾವುದೇ ಕಾರಣಕ್ಕೂ ಸ್ಥಗಿತಗೊಳಿಸುವುದಿಲ್ಲ ಎಂದು ಸ್ಪಷ್ಟಪಡಿಸಿರುವ ಅವರು, ಅರ್ಹ ಫಲಾನುಭವಿಗಳಿಗೆ ಮಾತ್ರ ಸೌಲಭ್ಯ ತಲುಪುವಂತೆ ಮಾಡಲು ಮರು ನೋಂದಣಿ ಪ್ರಕ್ರಿಯೆ ಕೈಗೊಳ್ಳಲಾಗುತ್ತದೆ ಎಂದು ಹೇಳಿದ್ದರು.

# ಜಿಲ್ಲಾ ಮಟ್ಟದ ಆಸ್ಮಿತಾ ವುಮೆನ್ಸ್ ಸೈಕ್ಲಿಂಗ್ ಲೀಗ್‌ಗೆ ಸಂಸದ ರಮೇಶ ಜಿಗಜಿಣಗಿ ಚಾಲನೆ



**ಬೆಳಗಾವಿ ವಾರ್ತೆ ವಿಜಯಪುರ:** ಸೈಕ್ಲಿಂಗ್ ಕ್ರೀಡೆಗೆ ರಾಜ್ಯದಲ್ಲೇ ವಿಶಿಷ್ಟ ಗುರುತನ್ನು ಹೊಂದಿರುವ ವಿಜಯಪುರ ನಗರದಲ್ಲಿ ಜಿಲ್ಲಾ ಮಟ್ಟದ ಆಸ್ಮಿತಾ ಖೇಲೋ ಇಂಡಿಯಾ ಮಹಿಳಾ ಸೈಕ್ಲಿಂಗ್ ಸಿಟಿ ಲೀಗ್ ಸ್ಪರ್ಧೆಯನ್ನು ಶನಿವಾರ ಅದ್ದೂರಿಯಾಗಿ ಆಯೋಜಿಸಲಾಯಿತು.

ಕೇಂದ್ರ ಸರ್ಕಾರದ ಕ್ರೀಡಾ ಪ್ರಾಧಿಕಾರ, ಸೈಕ್ಲಿಂಗ್ ಫೆಡರೇಷನ್ ಆಫ್ ಇಂಡಿಯಾ, ಕರ್ನಾಟಕ ರಾಜ್ಯ ಅಮೆಚೂರ್ ಸೈಕ್ಲಿಂಗ್ ಅಸೋಸಿಯೇಶನ್, ಜಿಲ್ಲಾ ಸೈಕ್ಲಿಂಗ್ ಅಸೋಸಿಯೇಶನ್, ವಿಶಾಲ್ ಸೈಕಲ್ ಮಾಲ್, ಜಿಲ್ಲಾಡಳಿತ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ನಡೆದ ಈ ಲೀಗ್‌ಗೆ ಸಂಸದ ರಮೇಶ ಜಿಗಜಿಣಗಿ ಹಾಗೂ ಮಾಜಿ ಸಚಿವ ಅಪ್ಪಾಸಾಹೇಬ ಪಟ್ಟಣಶೆಟ್ಟಿ, ಪ್ರಿನ್ಸಿಪಲ್ ರಾಜಲಕ್ಷ್ಮಿ ಪೃಥ್ವಿರಾಜ್, ಅಧ್ಯಕ್ಷ ರಾಜು ಬಿರಾದಾರ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಂಸದ ರಮೇಶ ಜಿಗಜಿಣಗಿ, ದೇಶದಲ್ಲಿ ಕ್ರೀಡಾ ಕ್ಷೇತ್ರದ ಬೆಳವಣಿಗೆಗೆ ಕೇಂದ್ರ ಸರ್ಕಾರ ವಿಶೇಷ ಒತ್ತು ನೀಡುತ್ತಿದ್ದು, ಮಹಿಳಾ ಕ್ರೀಡಾಪಟುಗಳಿಗೆ ಹೆಚ್ಚಿನ ಅವಕಾಶಗಳನ್ನು ಕಲ್ಪಿಸಲಾಗುತ್ತಿದೆ ಎಂದು ಹೇಳಿದರು.

ಪ್ರಧಾನಿ ನರೇಂದ್ರ ಮೋದಿ ಅವರ ಆಶಯದಂತೆ ದೇಶದ ವಿವಿಧ ಜಿಲ್ಲೆಗಳಲ್ಲಿ ಸೈಕ್ಲಿಂಗ್ ಸೇರಿದಂತೆ ವಿವಿಧ ಕ್ರೀಡಾಕೂಟಗಳನ್ನು ಆಯೋಜಿಸುವ ಮೂಲಕ ಗ್ರಾಮೀಣ ಹಾಗೂ ನಗರ ಪ್ರದೇಶಗಳ ಪ್ರತಿಭೆಗಳನ್ನು ಗುರುತಿಸುವ ಕಾರ್ಯ ನಡೆಯುತ್ತಿದೆ ಎಂದು ತಿಳಿಸಿದರು.

2038ರ ಒಲಿಂಪಿಕ್ಸ್ ಗುರಿಯಾಗಿ ಸಿಕೊಂಡು ಕ್ರೀಡಾಪಟುಗಳನ್ನು ಈಗಿನಿಂದಲೇ ಸಿದ್ಧಗೊಳಿಸುವ ಉದ್ದೇಶದಿಂದ ಇಂತಹ ಸ್ಪರ್ಧೆಗಳನ್ನು ಆಯೋಜಿಸಲಾಗುತ್ತಿದೆ. ರಾಜ್ಯದ ಆರು ಜಿಲ್ಲೆಗಳಲ್ಲಿ ಆಸ್ಮಿತಾ ಮಹಿಳಾ ಸೈಕ್ಲಿಂಗ್ ಲೀಗ್ ನಡೆಸಲಾಗುತ್ತಿದ್ದು, ಯುವತಿಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಕರ್ನಾಟಕ ರಾಜ್ಯ ಅಮೆಚೂರ್ ಸೈಕ್ಲಿಂಗ್ ಅಸೋಸಿಯೇಶನ್ ಅಧ್ಯಕ್ಷ ರಾಜು ಬಿರಾದಾರ, ವಿಜಯಪುರ ಜಿಲ್ಲೆ ರಾಜ್ಯದಲ್ಲಿಯೇ ಸೈಕ್ಲಿಂಗ್ ಕ್ರೀಡೆಗೆ ಹೆಸರುವಾಸಿಯಾಗಿದ್ದು, ರಾಷ್ಟ್ರೀಯ, ರಾಜ್ಯ ಹಾಗೂ ಜಿಲ್ಲಾ ಮಟ್ಟದ ಅನೇಕ ಸ್ಪರ್ಧೆಗಳಿಗೆ ಆತಿಥ್ಯ ವಹಿಸಿದೆ ಎಂದು ಹೇಳಿದರು.

ಜಿಲ್ಲೆಯ ಕ್ರೀಡಾಭಿಮಾನಿಗಳು ಹಾಗೂ ಸಹೃದಯ ದಾನಿಗಳ ಬೆಂಬಲದಿಂದ ಸೈಕ್ಲಿಂಗ್ ಕ್ರೀಡೆ ನಿರಂತರವಾಗಿ ಬೆಳೆಯುತ್ತಿದ್ದು, ಈ ಬಾರಿಯ ಆಸ್ಮಿತಾ ವುಮೆನ್ಸ್ ಲೀಗ್ ಕೂಡ ಯಶಸ್ವಿಯಾಗಿ ಆಯೋಜಿಸಲಾಗಿದೆ ಎಂದು ತಿಳಿಸಿದರು.

ಸ್ಪರ್ಧೆಯಲ್ಲಿ ಜಿಲ್ಲೆಯ ವಿವಿಧ ಭಾಗಗಳಿಂದ ಆಗಮಿಸಿದ್ದ ಮಹಿಳಾ ಸೈಕ್ಲಿಸ್ಟ್‌ಳು ಉತ್ಸಾಹದಿಂದ ಪಾಲ್ಗೊಂಡು ತಮ್ಮ ಸಾಮರ್ಥ್ಯ ಪ್ರದರ್ಶಿಸಿದರು.

ಸ್ಪರ್ಧೆಯ ನಂತರ ನಡೆದ ಸಮಾರೋಪ ಸಮಾರಂಭದಲ್ಲಿ ವಿಜೇತ ಕ್ರೀಡಾಪಟುಗಳಿಗೆ ಪ್ರಶಸ್ತಿ ಹಾಗೂ ಪದಕಗಳನ್ನು ವಿತರಿಸಲಾಯಿತು.

ಆಸ್ಮಿತಾ ವುಮೆನ್ಸ್ ಲೀಗ್ (ಇಂಡಿಯನ್ ಮೇಡ್ ಸೈಕ್ಲಿಂಗ್) ವಿಭಾಗದಲ್ಲಿ ಅಪೇಕ್ಷಾ ಜಗತಾಪ್ ಪ್ರಥಮ, ವೆಂಕವ್ವ ಧ್ಯಾಮಣ್ಣನವರ ದ್ವಿತೀಯ ಹಾಗೂ ಶ್ರೀದೇವಿ ತೃತೀಯ ಸ್ಥಾನ ಪಡೆದರು. 18 ವರ್ಷದ ವಯೋಮಿತಿ ವಿಭಾಗದಲ್ಲಿ ಐಶು ಚವ್ಹಾಣ ಪ್ರಥಮ, ಶಿವಬಾಯಿ ದ್ವಿತೀಯ ಹಾಗೂ ಶ್ವೇತಾ ತೃತೀಯ ಸ್ಥಾನ ಪಡೆದರು. 16 ವರ್ಷದೊಳಗಿನ ವಿಭಾಗದಲ್ಲಿ ಶಿವಾನಿ ಬೂದಿಹಾಳ ಪ್ರಥಮ, ಅಲ್ಫಿಯಾ ಜಹಾಗೀರದಾರ ದ್ವಿತೀಯ ಹಾಗೂ ಹರ್ಷಿತಾ ಭಜಂತ್ರಿ ತೃತೀಯ ಸ್ಥಾನ ಗಳಿಸಿದರು.

ಪ್ರೊಫೆಷನಲ್ ವಿಭಾಗದ ವುಮೆನ್ಸ್ ಎಲೈಟ್ ಸ್ಪರ್ಧೆಯಲ್ಲಿ ಗಂಗಾ ದಂಡಿ ಪ್ರಥಮ, ಪಾಯಲ್ ಚವ್ಹಾಣ ದ್ವಿತೀಯ ಹಾಗೂ ಸವಿತಾ ಆಡಗಲ್ ತೃತೀಯ ಸ್ಥಾನ ಪಡೆದರು. 18 ವರ್ಷದ ವಯೋಮಿತಿ ವಿಭಾಗದಲ್ಲಿ ಜ್ಯೋತಿ ರಾಠೋಡ ಪ್ರಥಮ, ದಿವ್ಯಶ್ರೀ ಲೋಣಿ ದ್ವಿತೀಯ ಹಾಗೂ ಸಂಗವ್ವ ಬನಸೋಡೆ ತೃತೀಯ ಸ್ಥಾನ ಪಡೆದರು. 16 ವರ್ಷದ ವಯೋಮಿತಿ ವಿಭಾಗದಲ್ಲಿ ವರ್ಷಾ ಚವ್ಹಾಣ ಪ್ರಥಮ, ಕೌಶಲ್ಯ ರಾಮಗೊಂಡ ದ್ವಿತೀಯ ಹಾಗೂ ಭೂಮಿಕಾ ಬೂದಿಹಾಳ ತೃತೀಯ ಸ್ಥಾನ ಪಡೆದು ಗಮನ ಸೆಳೆದರು.

ಮಹಾನಗರ ಪಾಲಿಕೆ ಸದಸ್ಯೆಯರಾದ ಆರತಿ ಶಹಾಪುರ, ಸ್ವಪ್ನಾ ಕಣಮುಚನಾಳ ಹಾಗೂ ಸುನೀತಾ ಮಹೇಶ ಒಡೆಯರ್ ಅವರು ವಿಜೇತರಿಗೆ ಪ್ರಶಸ್ತಿ ಪ್ರದಾನ ಮಾಡಿದರು. ಈ ವೇಳೆ ಮಾತನಾಡಿದ ಸ್ವಪ್ನಾ ಕಣಮುಚನಾಳ, ವಿಜಯಪುರ ಜಿಲ್ಲೆಯಲ್ಲಿ ಕ್ರೀಡೆಗೆ ಉತ್ತಮ ಪ್ರೋತ್ಸಾಹ ದೊರೆಯುತ್ತಿದ್ದು, ಮುಂದಿನ ದಿನಗಳಲ್ಲಿ ಇಲ್ಲಿಂದ ರಾಷ್ಟ್ರ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡುವ ಸೈಕ್ಲಿಂಗ್ ಪಟುಗಳು ಹೊರಹೊಮ್ಮಲಿ ಎಂದು ಆಶಿಸಿದರು. ಇದೇ ಸಂದರ್ಭದಲ್ಲಿ ಎರಡನೇ ಬಾರಿಗೆ ರಾಜ್ಯ ಅಮೆಚೂರ್ ಸೈಕ್ಲಿಂಗ್ ಅಸೋಸಿಯೇಷನ್‌ನ ಅಧ್ಯಕ್ಷರಾಗಿ ಆಯ್ಕೆಯಾದ ರಾಜು ಬಿರಾದಾರ ಅವರಿಗೆ ಗೌರವಪೂರ್ವಕವಾಗಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಮಹಾಪೌರ ಮಡಿವಾಳಪ್ಪ ಕರಡಿ, ಸೈನಿಕ ಶಾಲೆಯ ಪ್ರಾಂಶುಪಾಲೆ ರಾಜಲಕ್ಷ್ಮಿ ಪೃಥ್ವಿರಾಜ, ಮಹಾನಗರ ಪಾಲಿಕೆ ಸದಸ್ಯರಾದ ರಾಹುಲ್ ಜಾಧವ, ಶಿವರುದ್ರ ಬಾಗಲಕೋಟ, ಆಸೀಫ್ ಶ್ಯಾನವಾಲೆ, ಅಷ್ಫಾಕ್ ಮನಗೂಳಿ, ವಿಸಿಜಿ ಗ್ರೂಪ್‌ನ ಶಿವನಗೌಡ ಪಾಟೀಲ, ವಿಶಾಲ್ ಸೈಕಲ್ ಮಾಲ್‌ನ ವಿಶಾಲ ಹಿರಜಕರ, ಡಿವೈಎಸ್ಪಿ ನಾಗರಾಜ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಧಿಕಾರಿ ರಾಜಶೇಖರ ದೈವಾಡಿ ಸೇರಿದಂತೆ ಅನೇಕ ಗಣ್ಯರು, ಕ್ರೀಡಾಭಿಮಾನಿಗಳು ಹಾಗೂ ಹಿರಿಯ ಸೈಕ್ಲಿಸ್ಟ್‌ಳು ಉಪಸ್ಥಿತರಿದ್ದರು.

# ಹಸಿವು ಮುಕ್ತ ಸೇವೆಯ 100ನೇ ವಾರ: ನೂರಾರು ನಿರ್ಗತಿಕರಿಗೆ ಅನ್ನದಾನ



**ಬೆಳಗಾವಿ ವಾರ್ತೆ ವಿಜಯಪುರ:** ದೇಶ ರಕ್ಷಕರ ಪಡೆ ಸಂಚಾಲಿತ ಅನ್ನ ಸ್ನೇಹಿ ಸೇವಾ ಬಳಗ ವತಿಯಿಂದ ಹಮ್ಮಿಕೊಳ್ಳಲಾಗುತ್ತಿರುವ "ಹಸಿವು ಮುಕ್ತ ಸೇವಾ ಕಾರ್ಯಕ್ರಮ"ದ 100ನೇ ವಾರವನ್ನು ಶುಕ್ರವಾರ ಯಶಸ್ವಿಯಾಗಿ ಆಚರಿಸಲಾಯಿತು.

ನಗರದ ವಿವಿಧ ಭಾಗಗಳಲ್ಲಿ ಬೇರೆ ಊರಿಗೆ ತೆರಳುವ ಪ್ರಯಾಣಿಕರು, ನಿರ್ಗತಿಕರು ಹಾಗೂ ಆಶ್ರಯಹೀನರಿಗೆ ಉಚಿತವಾಗಿ ಬಿಸಿ ಊಟ ವಿತರಿಸಲಾಯಿತು.

ಈ ಉದಾತ್ತ ಅನ್ನದಾನ ಕಾರ್ಯಕ್ರಮದ ಅಂಗವಾಗಿ ಜಿಲ್ಲಾ ಸರ್ಕಾರಿ ಆಸ್ಪತ್ರೆ ಆವರಣ, ಕೇಂದ್ರ ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ ಹಾಗೂ ನಗರದ ಪ್ರಮುಖ ವೃತ್ತಗಳ ರಸ್ತೆ ಬದಿಯಲ್ಲಿ ವಾಸಿಸುವ ನೂರಾರು ಜನರನ್ನು ದೇಶ ರಕ್ಷಕರ ಪಡೆ ಸ್ವಯಂಸೇವಕರು ಖುದ್ದಾಗಿ ಭೇಟಿ ಮಾಡಿ ಗೌರವಪೂರ್ವಕವಾಗಿ ಸಿದ್ಧಪಡಿಸಿದ ಆಹಾರವನ್ನು ವಿತರಿಸಿದರು.

ಕಾರ್ಯಕ್ರಮಕ್ಕೆ ಮಹಾನಗರ ಪಾಲಿಕೆ ಉಪ ಆಯುಕ್ತ ಮಹಾವೀರ ಬೋರಣ್ಣವರ, ಖ್ಯಾತ ಮಧುಮೇಹ ತಜ್ಞ ಡಾ. ಬಾಬು ರಾಜೇಂದ್ರ ನಾಯಿಕ, ಮಹಾನಗರ ಪಾಲಿಕೆ ಸದಸ್ಯರಾದ ಶಿವರುದ್ರ ಬಾಗಲಕೋಟ, ರಾಹುಲ್ ಜಾಧವ್ ಹಾಗೂ ಬಂದೇನವಾಜ್ ಬೀಳಗಿ ವಿಶೇಷ ಅತಿಥಿಗಳಾಗಿ ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಸಂಘಟನೆಯ ಸಂಸ್ಥಾಪಕ ರೋಹನ್ ಆಪ್ಟೆ, "ಮಾನವ ಸೇವೆಯೇ ಮಾಧವ ಸೇವೆ ಎಂಬ ಧ್ಯೇಯದೊಂದಿಗೆ ಅನ್ನ ಸ್ನೇಹಿ ಸೇವಾ ಬಳಗ ನಿರಂತರವಾಗಿ ಸಮಾಜಮುಖಿ ಕಾರ್ಯಗಳನ್ನು ಕೈಗೊಳ್ಳುತ್ತಿದೆ. ಹಸಿದವರ ಹೊಟ್ಟೆ ತುಂಬಿಸುವ ಕಾರ್ಯಕ್ಕಿಂತ ಶ್ರೇಷ್ಠ ಸೇವೆ ಮತ್ತೊಂದಿಲ್ಲ" ಎಂದು ಹೇಳಿದರು.

ಸಂಘಟನೆಯ ಅಧ್ಯಕ್ಷ ಆಕಾಶ ಇಂಡಿ ಮಾತನಾಡಿ, "ಹಸಿದವರಿಗೆ ಅನ್ನ ನೀಡುವುದಕ್ಕಿಂತ ಮಿಗಿಲಾದ ಧರ್ಮ ಮತ್ತೊಂದಿಲ್ಲ. ಈ ಸೇವಾ ಕಾರ್ಯವನ್ನು ಚಿರಸ್ಥಾಯಿಯಾಗಿಸುವುದು ನಮ್ಮ ಪ್ರಮುಖ ಉದ್ದೇಶವಾಗಿದೆ. ಮುಂದಿನ ದಿನಗಳಲ್ಲೂ ಇಂತಹ ಮಾನವೀಯ ಸೇವೆಗಳು ನಿರಂತರವಾಗಿ ಮುಂದುವರಿಯಲಿವೆ" ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ದೇಶ ರಕ್ಷಕರ ಪಡೆಯ ವಿಕ್ರಮ್ ತಂಬೇಕರ, ಜಗದೀಶ ರೂಗಿಮಠ, ಕಿರಣ ಕೊಳುರಗಿ, ಶಶಿ, ಸುಜಿತ್, ಕೃಷ್ಣ, ಶಶಿಧರ, ಮುತ್ತು, ಮೈಬುಬ, ಮುಸ್ತಾಕ್, ಶಾಂತು, ಸಂತೋಷ, ಮಹಾಂತೇಶ್, ಪ್ರಕಾಶ, ವಿನಾಯಕ, ಸಾಗರ, ವಿರೇಶ್, ವಿನೋದ್ ಪತ್ತಾರ ಸೇರಿದಂತೆ ಅನ್ನ ಸ್ನೇಹಿ ಸೇವಾ ಬಳಗದ ಸದಸ್ಯರು ಹಾಗೂ ಸ್ಥಳೀಯ ಮುಖಂಡರು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

# ರಾಜ್ಯ ಸರ್ಕಾರದ ವಿಶೇಷಾಧಿಕಾರಿ ಡಾ|| ದ್ಯಾಬೇರಿ ಜಿಲ್ಲಾ ಆಸ್ಪತ್ರೆಗೆ ಭೇಟಿ, ಪರಿಶೀಲನೆ



**ಬೆಳಗಾವಿ ವಾರ್ತೆ ವಿಜಯಪುರ:** ಜಿಲ್ಲೆಯ ಜನರ ಬಹುಕಾಲದ ಕನಸಾಗಿರುವ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆಗೆ ಸಂಬಂಧಿಸಿದಂತೆ ಮಹತ್ವದ ಬೆಳವಣಿಗೆಯೊಂದು ನಡೆದಿದೆ. ರಾಜ್ಯ ಸರ್ಕಾರದ ವಿಶೇಷಾಧಿಕಾರಿ ಡಾ. ರಾಜಶೇಖರ್ ದ್ಯಾಬೇರಿ ಅವರು ವಿಜಯಪುರ ಜಿಲ್ಲಾ ಆಸ್ಪತ್ರೆಗೆ ಭೇಟಿ ನೀಡಿ ವೈದ್ಯಕೀಯ ಕಾಲೇಜು ಸ್ಥಾಪನೆಗೆ ಅಗತ್ಯವಿರುವ ಮೂಲ ಸೌಕರ್ಯ, ಆಸ್ಪತ್ರೆಯ ಸೌಲಭ್ಯಗಳು ಹಾಗೂ ಲಭ್ಯವಿರುವ ಸಂಪನ್ಮೂಲಗಳ ಕುರಿತು ಸಮಗ್ರ ಪರಿಶೀಲನೆ ನಡೆಸಿದರು.

ಪರಿಶೀಲನೆ ವೇಳೆ ವಿಜಯಪುರ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನಾ ಹೋರಾಟ ಸಮಿತಿಯ ಸದಸ್ಯರು ವಿಶೇಷಾಧಿಕಾರಿಗಳನ್ನು ಭೇಟಿ ಮಾಡಿ ಜಿಲ್ಲೆಯ ಜನರ ಬಹುವರ್ಷಗಳ ಬೇಡಿಕೆ, ವೈದ್ಯಕೀಯ ಶಿಕ್ಷಣದ ಅಗತ್ಯತೆ ಹಾಗೂ ಜಿಲ್ಲೆಯ ಆರೋಗ್ಯ ಕ್ಷೇತ್ರದ ಸವಾಲುಗಳ ಕುರಿತು ವಿವರವಾದ ಮಾಹಿತಿಯನ್ನು ನೀಡಿದರು.

ಸಮಿತಿಯ ಸದಸ್ಯರು ವಿಜಯಪುರವು ಉತ್ತರ ಕರ್ನಾಟಕದ ಪ್ರಮುಖ ಜಿಲ್ಲೆಯಾಗಿದ್ದರೂ ಇಲ್ಲಿಯವರೆಗೆ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆಯಾಗದಿರುವುದು ಜಿಲ್ಲೆಯ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಿಗೆ ಅನ್ಯಾಯವಾಗಿದೆ ಎಂದು ಅಭಿಪ್ರಾಯಪಟ್ಟರು.

ವೈದ್ಯಕೀಯ ಶಿಕ್ಷಣ ಪಡೆಯಲು ವಿದ್ಯಾರ್ಥಿಗಳು ದೂರದ ಜಿಲ್ಲೆಗಳಿಗೆ ತೆರಳಬೇಕಾದ ಅನಿವಾರ್ಯತೆ ಎದುರಿಸುತ್ತಿದ್ದು, ಬಡ ಹಾಗೂ ಮಧ್ಯಮ ವರ್ಗದ ಕುಟುಂಬಗಳ ಮೇಲೆ ಹೆಚ್ಚುವರಿ ಆರ್ಥಿಕ ಹೊರೆ ಬೀಳುತ್ತಿದೆ ಎಂದು ತಿಳಿಸಿದರು.

ಇದಲ್ಲದೆ, ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆಯಾದಲ್ಲಿ ಜಿಲ್ಲೆಯ ಆರೋಗ್ಯ ಸೇವೆಗಳ ಗುಣಮಟ್ಟ ಹೆಚ್ಚುವುದರ ಜೊತೆಗೆ ತಜ್ಞ ವೈದ್ಯರ ಲಭ್ಯತೆ, ಆಧುನಿಕ ಚಿಕಿತ್ಸಾ ಸೌಲಭ್ಯಗಳು ಹಾಗೂ ವೈದ್ಯಕೀಯ ಕ್ಷೇತ್ರದಲ್ಲಿ ಉದ್ಯೋಗಾವಕಾಶಗಳು ಹೆಚ್ಚಾಗಲಿವೆ ಎಂದು ಹೋರಾಟ ಸಮಿತಿ ಪ್ರತಿಪಾದಿಸಿತು.

ವಿಶೇಷಾಧಿಕಾರಿ ಡಾ. ರಾಜಶೇಖರ ದ್ಯಾಬೇರಿ ಅವರು ಆಸ್ಪತ್ರೆಯ ವಿವಿಧ ವಿಭಾಗಗಳನ್ನು ಪರಿಶೀಲಿಸಿ, ಅಗತ್ಯ ಮಾಹಿತಿಯನ್ನು ಸಂಗ್ರಹಿಸಿದರು. ಪರಿಶೀಲನೆ ವರದಿಯನ್ನು ಶೀಘ್ರದಲ್ಲೇ ರಾಜ್ಯ ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ಅವರು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಹೋರಾಟ ಸಮಿತಿಯ ಸದಸ್ಯರು, ಜಿಲ್ಲೆಯ ಜನರ ನ್ಯಾಯಸಮ್ಮತ ಬೇಡಿಕೆಗೆ ಸರ್ಕಾರ ಸಕಾರಾತ್ಮಕವಾಗಿ ಸ್ಪಂದಿಸಿ, ಮುಂಬರುವ ಬಜೆಟ್ ಅಥವಾ ಆಡಳಿತಾತ್ಮಕ ಹಂತದಲ್ಲೇ ವಿಜಯಪುರ ಸರ್ಕಾರಿ ವೈದ್ಯಕೀಯ ಕಾಲೇಜಿಗೆ ಅಧಿಕೃತ ಅನುಮೋದನೆ ನೀಡಬೇಕು ಎಂದು ಒತ್ತಾಯಿಸಿದರು.

ವಿಜಯಪುರ ಜಿಲ್ಲೆಯ ಅಭಿವೃದ್ಧಿ, ಆರೋಗ್ಯ ಸೇವೆಗಳ ವಿಸ್ತರಣೆ ಹಾಗೂ ಯುವಕರ ಭವಿಷ್ಯದ ದೃಷ್ಟಿಯಿಂದ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆ ಅತ್ಯಂತ ಅಗತ್ಯವಾಗಿದ್ದು, ಈ ಬೇಡಿಕೆ ಈಡೇರುವವರೆಗೆ ಹೋರಾಟ ನಿರಂತರವಾಗಿ ಮುಂದುವರಿಯಲಿದೆ ಎಂದು ಹೋರಾಟ ಸಮಿತಿ ತಿಳಿಸಿದೆ.

ಈ ಸಂದರ್ಭದಲ್ಲಿ ಜಿಲ್ಲಾ ಶಸ್ತ್ರಚಿಕಿತ್ಸಕ ಶಿವಾನಂದ ಮಾಸ್ತಿಹೊಳಿ ಹೋರಾಟ ಸಮಿತಿಯ ಸದಸ್ಯರಾದ ಅನಿಲ್ ಹೊಸಮನಿ, ಅರವಿಂದ ಕುಲಕರ್ಣಿ, ಬಿ.ಭಾಗವಾನ ರೆಡ್ಡಿ, ಅಕ್ರಮ ಮಾಶಾಳಕರ, ಸುರೇಶ ಜೀಬಿ, ಪೂಜ್ಯ ಸಂಗನಬಸವ ಸ್ವಾಮೀಜಿ, ಲಲಿತಾ ಬಿಜ್ಜರಗಿ, ಎಲ್.ಎಚ್. ಲೆಂಡಿ, ಸಿದ್ದಲಿಂಗ ಬಾಗೇವಾಡಿ, ಡಾ. ಗುರಿಕರ, ಗಿರೀಶ ಕಲಘಟಗಿ, ಲಕ್ಷ್ಮಣ ಕಂಬಾಗಿ, ಸಿದ್ರಾಮ ಹಿರೇಮಠ, ಮಲ್ಲು ಕಾಮನಕೇರಿ, ಶಿವರಂಜಿನಿ ಮತ್ತಿತರರು ಇದ್ದರು.

# ಹಿರಿಯ ಮುತ್ಸದ್ದಿ ರಾಜಕಾರಣಿ ಎಚ್.ಕೆ. ಪಾಟೀಲ ಅವರಿಗೆ ಸಚಿವ ಸ್ಥಾನ ನೀಡಲೇಬೇಕು ಗದಗ-ಬೆಟಗೇರಿ ಶಹರ ಮಹಿಳಾ ಕಾಂಗ್ರೆಸ್ ಆಗ್ರಹ



**ಬೆಳಗಾವಿ ವಾರ್ತೆ ಗದಗ:** ಹಿರಿಯ ಮುತ್ಸದ್ದಿ ರಾಜಕಾರ ಣಿ ಎಚ್.ಕೆ. ಪಾಟೀಲ ಅವರಿಗೆ ಸಚಿವ ಸ್ಥಾನ ನೀಡಲೇಬೇಕು ಎಂದು ಗದಗ-ಬೆಟಗೇರಿ ಶಹರ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಶಕುಂತಲಾ ಅಕ್ಕಿ ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿಯಾಗಲು ಅರ್ಹರಾಗಿರುವ ಎಚ್.ಕೆ. ಪಾಟೀಲ ಅವರಿಗೆ ಸಚಿವ ಸ್ಥಾನ ನೀಡದಿರುವುದು ಇಡೀ ಉತ್ತರ ಕರ್ನಾಟಕ ಭಾಗಕ್ಕೆ ಅನ್ಯಾಯ ಮಾಡಿದಂತಾಗಿದೆ ಎಂದು ಅಸಮಾಧಾನ್ನವ್ಯಕ್ತಪಡಿಸದರು.

ದಿಟ್ಟ, ಪ್ರಾಮಾಣಿಕ, ಕಳಂಕರಹಿತ & ರಾಜ್ಯದ ಹಿರಿಯ ನಾಯಕರಾ ಗಿರುವ ಎಚ್.ಕೆ. ಪಾಟೀಲ ಅವರಿಗೆ ಮೊದಲ ಸಂಪುಟದಲ್ಲೇ ಸಚಿವ ಸ್ಥಾನ ನೀಡಬೇಕಿತ್ತು. ಆದರೆ, ಸಚಿವ ಸಂಪು ಟ ವಿಸ್ತರಣೆಯಲ್ಲಿ ಎಚ್.ಕೆ. ಪಾಟೀಲ ಅವರನ್ನು ಕಡೆಗಣಿಸದೇ ಸಚಿವ ಸ್ಥಾನ ನೀಡಲೇಬೇಕು ಎಂದು ಒತ್ತಾಯಿಸಿದರು.

ಜಿಪಂ ಮಾಜಿ ಉಪಾಧ್ಯಕ್ಷೆ ಶಕುಂತಲಾ ಮೂಲಿಮನಿ ಮಾತನಾಡಿ,ಗದಗ ಜಿಲ್ಲೆ ಸೇರಿ ರಾಜ್ಯಾದ್ಯಂತ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಪರಿಚಯಿಸಿದ ಎಚ್.ಕೆ. ಪಾಟೀಲ ಅವರು ತಾವು ವಹಿಸಿಕೊಂಡ ಸಚಿವ ಸ್ಥಾನಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸುವುದರ ಜೊತೆಗೆ ಸಚಿವ ಸ್ಥಾನದ ಘನತೆನ್ನು ಹೆಚ್ಚಿಸಿದ್ದಾರೆ. ಗ್ರಾಮೀಣಾಭಿವೃದ್ಧಿ ವಿವಿ ಸ್ಥಾಪನೆ ಸೇರಿ ಹಲವಾರು ಕಾರ್ಯಗಳನ್ನು ಮಾಡಿರುವ ಎಚ್.ಕೆ. ಪಾಟೀಲ ಅವರನ್ನು ಕಡೆಗಣಿಸಿರುವುದು ನೋವಿನ ಸಂಗತಿಯಾಗಿದೆ. ಇನ್ನಾದರೂ ಸಿಎಂ ಡಿ.ಕೆ. ಶಿವಕುಮಾರ ಸೇರಿ ಹೈಕಮಾ ಂಡ್ ಎಚ್.ಕೆ. ಪಾಟೀಲ ಅವರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡಬೇಕು ಎಂದು ಆಗ್ರಹಿಸಿದರು.

ಮುಖಂಡರಾದ ದ್ರಾಕ್ಷಾಯಿ ಣಿ ಹಾಸಿಲಕರ, ಮೀನಾಕ್ಷಿ ಬೆನಕಣ್ಣವರ, ವೀಣಾ ಕಟ್ನಳ್ಳಿ, ಲಕ್ಷ್ಮೀ ಸಿದ್ದಮನಹಳ್ಳಿ, ಮುಸ್ಕಾನ್ ಸಯ್ಯದ್, ಯಲ್ಲಮ್ಮ ಜಡಿ, ರುದ್ರಮ್ಮ ಕೆರಕಲಮಟ್ಟಿ, ಲತಾ ಗೊಳಗೊಳಕಿ, ವಾಣಿ ಹಿರೇಮಠ ಸೇರಿ ಮುಖಂಡರು ಇದ್ದರು.

# ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಕೈಜೋಡಿಸಿ

**ಬೆಳಗಾವಿ ವಾರ್ತೆ ವಿಜಯಪುರ:** ಸಮಾಜದಲ್ಲಿನ ಅನಿಷ್ಠ ಪಿಡುಗಾಗಿರುವ ಬಾಲ ಕಾರ್ಮಿಕ ಪದ್ಧತಿಯನ್ನು ನಿರ್ಮೂಲನೆ ಮಾಡುವ ನಿಟ್ಟಿನಲ್ಲಿ ಸಾರ್ವಜನಿಕರು ಕೈಜೋಡಿಸಿ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಹರೀಶ ಎ. ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಪೊಲೀಸ್ ಇಲಾಖೆ, ಕಾರ್ಮಿಕ ಇಲಾಖೆ, ಶಿಕ್ಷಣ ಇಲಾಖೆ ಹಾಗೂ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸಂಘ ಇವರ ಸಹಯೋಗದಲ್ಲಿ ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಆಚರಿಸಲಾದ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.



ಬಾಲಕಾರ್ಮಿಕ ಪದ್ಧತಿ ಮತ್ತು ಬಾಲ್ಯ ವಿವಾಹದ ಕುರಿತು ಜನರಲ್ಲಿ ಸೂಕ್ತ ತಿಳುವಳಿಕೆ ಹಾಗೂ ಕಾನೂನಿನ ಜಾಗೃತಿ ಹೊಂದುವುದು ಅಗತ್ಯವಾವಾಗಿದೆ. ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಬೇಕು. ಮಕ್ಕಳ ಹಕ್ಕುಗಳ ಕುರಿತಾಗಿ ಸೂಕ್ತ ಅರಿವು ಮೂಡಿಸಬೇಕು. ಈ ಬಗ್ಗೆ ಜಾಗೃತಿ ಹಾಗೂ ಸಹಕಾರ ನೀಡಲು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಾ ಸಿದ್ಧವಾಗಿದೆ ಎಂದು ಹೇಳಿದರು.

ಮಕ್ಕಳ ಶ್ರೇಯೋಭಿವೃದ್ಧಿಗಾಗಿ ಇರುವ ಕಾನೂನಾತ್ಮಕ ಕ್ರಮಗಳ ಕುರಿತು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳಾದ ಅರವಿಂದ ಎಸ್ ಹಾಗರಗಿ ಅವರು ತಿಳಿಸಿದರು.

ಬಾಲಕಾರ್ಮಿಕ ಕಾಯ್ದೆ 1986 ಹಾಗೂ ತಿದ್ದುಪಡಿ ಕಾಯ್ದೆ 2016 ರನ್ವಯ ಪ್ರತಿ ತಿಂಗಳು ವಿವಿಧ ಇಲಾಖೆಗಳ ಅಧಿಕಾರಿಗಳ ತಂಡದೊಂದಿಗೆ ಅನಿರೀಕ್ಷಿತ ದಾಳಿ ಕೈಗೊಂಡು ಮಕ್ಕಳನ್ನು ರಕ್ಷಿಸಿ ಪ್ರಕರಣ ದಾಖಲಿಸಿ ತಪ್ಪಿತಸ್ಥ ಮಾಲೀಕರಿಂದ ಕಾರ್ಪಸ್ ನಿಧಿ ವಸೂಲಿ ಮಾಡಲು ಅಗತ್ಯ ಕಾನೂನು ಕ್ರಮಗಳನ್ನು ಕೈಗೊಳ್ಳಲಾಗುತ್ತದೆ. ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆ ಕುರಿತು ಜನಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತದೆ. ಬಾಲ ಕಾರ್ಮಿಕ ಮುಕ್ತ ಜಿಲ್ಲೆಯನ್ನಾಗಿ ಮಾಡಲು ಎಲ್ಲ ಇಲಾಖೆಗಳ ಸಹಕಾರದ ಅಗತ್ಯವಿದೆ ಎಂದು ಇಲಾಖೆಯ ಕಾರ್ಯ ವೈಖರಿಯೊಂದಿಗೆ ಬಾಲಕಾರ್ಮಿಕ ಪದ್ಧತಿಯನ್ನು ತೊಡೆದು ಹಾಕಲು ಎಲ್ಲ ಇಲಾಖೆಗಳ ಹಾಗೂ ಸಾರ್ವಜನಿಕರ ಸಹಕಾರದ ಅಗತ್ಯವಿದೆ ಎಂದು ಕಾರ್ಮಿಕ ಅಧಿಕಾರಿ ರಮೇಶ ಎಸ್. ಸುಂಬಡ ಪ್ರಾಸ್ತಾವಿಕ ವಾಗಿ ಮಾತನಾಡಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕಿ ನಿರ್ಮಲಾ ಸುರಪುರ, ಬಾಲಕಾರ್ಮಿಕ ಪದ್ಧತಿ, ಬಾಲ್ಯ ವಿವಾಹದಂತಹ ಪ್ರಕರಣಗಳು ಕಂಡು ಬಂದಲ್ಲಿ 1098 ಕರೆ ಮಾಡಬೇಕು. ಎಲ್ಲಾ ಮಕ್ಕಳು ಶಿಕ್ಷಣ ಪಡೆಯುವುದು ಅವರ ಹಕ್ಕಾಗಿದೆ. ಮಕ್ಕಳಿಗೆ ಸಂಬಂಧಿಸಿದಂತೆ ಯಾವುದೇ ಸಮಸ್ಯೆಗಳು ಎದುರಾದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕಕ್ಕೆ ಮಾಹಿತಿ ನೀಡಬೇಕೆಂದು ಹೇಳಿದರು.

ಬಾಲ ಕಾರ್ಮಿಕ ಪದ್ಧತಿಯ ನಿರ್ಮೂಲನೆಯ ಕುರಿತು ಫಾದರ್ ಸುಮನ್ ಬಾಲು ಅವರು ಉಪನ್ಯಾಸ ನೀಡಿದರು.

ಈ ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ಔದ್ರಾಮ, ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ವೀರಯ್ಯ ಸಾಲಿಮಠ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ದೀಪಾ ಕಾಳೆ, ಕಾರ್ಮಿಕ ನಿರೀಕ್ಷಕಿ ಜಗದೇವಿ ಸಜ್ಜನ, ಅನೌಪಚಾರಿಕ ಶಿಕ್ಷಣ ಸಂಸ್ಥೆಯ ಮಹಾದೇವಿ ರಾಠೋಡ, ಕಾರ್ಮಿಕ ನಿರೀಕ್ಷಕಿ ಜಗದೇವಿ ಸಜ್ಜನ, ಕಾರ್ಮಿಕ ನಿರೀಕ್ಷಕ ಕುಮಾರ ಮಲ್ಲಿಕಾರ್ಜುನ ಸೇರಿದಂತೆ ಕಾರ್ಮಿಕ ಇಲಾಖೆ, ಅನೌಪಚಾರಿಕ ಶಿಕ್ಷಣ ಸಂಸ್ಥೆಯ ಸಿಬ್ಬಂದಿ, ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಬಿತ್ತನೆಯಾಗಿರುವ ಹೆಸರು ಬೆಳೆಗೆ ಹಳದಿ ರೋಗ



**ಬೆಳಗಾವಿ ವಾರ್ತೆ ಲಕ್ಷ್ಮೇಶ್ವರ:** ತಾಲೂಕಿನ ಗೊಜನೂರು ಗ್ರಾಮದಲ್ಲಿ ಸಾವಯವ ಕೃಷಿ ಮಾಡಿರುವ ರೈತ ಮಾಂತೇಶಸೊರಟೂರ ಅವರ ಜಮೀನಿನಲ್ಲಿ ಬಿತ್ತನೆಯಾಗಿರುವ ಹೆಸರುಬೆಳೆಗೆ ಹಳದಿ ರೋಗ ಭಾಗಿಸಿದ್ದು ಇದು ರೈತನನ್ನು ಚಿಂತೆಗೀಡು ಮಾಡಿದೆ.

ಈ ಹಿನ್ನೆಲೆಯಲ್ಲಿ ಕೃಷಿ ಇಲಾಖೆ ಸಹಾಯಕ ನಿರ್ದೇಶಕರಾದ ಶಿವಕುಮಾರ್ ಕಾಶಪ್ಪನವರ ಭೇಟಿ ನೀಡಿ ಬೆಳೆಯನ್ನು ಪರಿಶೀಲನೆ ಮಾಡಿದರು.

ಬಳಿಕ ಅವರು ರೈತರೊಂದಿಗೆ ಚರ್ಚಿಸಿ ಹೆಸರುಬೇಳೆಗೆ ವೈರಸುಗಳು ಆವರಿಸಿದ್ದು ಇದರಿಂದಾಗಿ ಬೆಳೆ ಹಳದಿಯಾಗಿವೆ ಈ ನಿಟ್ಟಿನಲ್ಲಿ ಕೂಡಲೇ ರಾಸಾಯನಿಕಗಳನ್ನು ಸಿಂಪಡಿಸುವ ಮೂಲಕ ರೋಗ ನಿರೋಧಕ ಶಕ್ತಿಯನ್ನು ಬೆಳೆಗಳಿಗೆ ಕೊಡಬೇಕು ಎಂದು ಸೂಚಿಸಿದರು.

ಆದರೆ ರೈತ ಮಹಾಂತೇಶ ಸೋರಟೊರ ಅವರು ತಾವು ಸಾವಯವ ಕೃಷಿ ಮಾಡುತ್ತಿದ್ದು ಪರ್ಯಾಯ ವ್ಯವಸ್ಥೆಯನ್ನು ಹೇಳಬೇಕು ಅಂದಾಗ ಬೇವಿನ ಎಣ್ಣೆಯನ್ನು ಸಿಪಡಿಸಬೇಕು ಎಂದರು.

ಇದೇ ಸಂದರ್ಭದಲ್ಲಿ ಸಹಾಯಕ ಕೃಷಿ ನಿರ್ದೇಶಕರು ರೈತನ ಜಮೀನಿನಲ್ಲಿ ಸೈಕಲ್ ಯಂತ್ರದ ಮೂಲಕ ಎಡೆ ಹೊಡೆದು ಯಂತ್ರಗಳ ಉಪಯೋಗದ ಬಗ್ಗೆಯೂ ವಿವರಿಸಿದರು.

# ತಂಬಾಕು ತ್ಯಜಿಸಿ ಆರೋಗ್ಯ ಉತ್ತಮವಾಗಿಟ್ಟುಕೊಳ್ಳಿ



**ಬೆಳಗಾವಿ ವಾರ್ತೆ ನವಲಗುಂದ:** ತಂಬಾಕು ತ್ಯಜಿಸಿ ಆರೋಗ್ಯವನ್ನು ಉತ್ತಮವಾಗಿಟ್ಟುಕೊಳ್ಳಲು ಪ್ರತಿಯೊಬ್ಬರು ಮುಂದಾಗಬೇಕೆಂದು ಕಾಲವಾಡ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಡಾ. ಕೃಷ್ಣರೆಡ್ಡಿ ಕಣ್ಣೂರು ಹೇಳಿದರು

ತಾಲ್ಲೂಕಿನ ಅರೇಕುರಹಟ್ಟಿ ಗ್ರಾಮದಲ್ಲಿ ಶುಕ್ರವಾರ " ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಹಾಗೂ ಅಖಿಲ ಕರ್ನಾಟಕ ಜನ ಜಾಗೃತಿ ವೇದಿಕೆ ಆಯೋಜಿಸಿದ್ದ ವಿಶ್ವ ತಂಬಾಕು ವಿರೋಧಿ ದಿನಾಚರಣೆ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.

ಇದಕ್ಕೂ ಮೊದಲು ಮುಖ್ಯಅತಿಥಿಯಾದ ನಿರ್ಮಲಾ ಬಸಪ್ಪ ಅರಳಿಕಟ್ಟೆಯವರು ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ ಇತ್ತೀಚಿನ ದಿನಗಳಲ್ಲಿ ಹದಿಹರೆಯದ ಯುವಕರು, ಯುವತಿಯರು, ತಂಬಾಕು ಸೇವನೆಗೆ ಒಳಗಾಗಿ ದುಶ್ಚಟಗಳ ದಾಸರಾಗಿ ಹಲವಾರು ಸಮಾಜಘಾತಕ ಚಟುವಟಿಕೆಗಳಲ್ಲಿ ತೊಡಗಿಕೊಳ್ಳುತ್ತಿರುವುದು ಆತಂಕಾರಿ ವಿ ಈ ಸಂಬಂಧ ವಿದ್ಯಾರ್ಥಿ ದಿಸೆಯಲ್ಲಿಯೇ ಮಕ್ಕಳಿಗೆ ತಂಬಾಕು ಉತ್ಪನ್ನಗಳ ಜಾಗೃತಿ ಅತ್ಯವಶ್ಯಕವಾಗಿದೆ.

ಯುವಕರಿಗೆ ತಂಬಾಕು ಉತ್ಪನ್ನಗಳ ಬಳಕೆಯಿಂದ ಉಂಟಾಗುವ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸುವ ಜೊತೆಗೆ ಕಾನೂನಿನ ಚೌಕಟ್ಟಿನಲ್ಲಿ ಕೈಗೊಳ್ಳಬೇಕಾದ ಕ್ರಮಗಳನ್ನು ಅನುಸರಿಸಿದರೆ ಆಗುತ್ತಿರುವ ಸಾವು ನೋವಿನ ಪ್ರಮಾಣವನ್ನು ಕಡಿಮೆ ಮಾಡಬಹುದೆಂದರು.

ಅಧ್ಯಕ್ಷತೆ ವಹಿಸಿದ್ದ ತಾಲ್ಲೂಕು ಯೋಜನಾಧಿಕಾರಿ ದಿನೇಶ್ ಶೇರಿಗಾರ್ ಮಾತನಾಡಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ರಾಜ್ಯ ಜಿಲ್ಲೆ ತಾಲೂಕು ಕೇಂದ್ರಗಳಲ್ಲಿ ತಂಬಾಕು ವಿರೋಧಿ ದಿನಾಚರಣೆ ಕಾರ್ಯಕ್ರಮವನ್ನು ಆಯೋಜಿಸುವ ಮೂಲಕ ಜಾಗೃತಿ ಮೂಡಿಸುತ್ತಿದೆ ಎಂದರು.

ಒಕ್ಕೂಟದ ಕೋಶಾಧಿಕಾರಿ ನೀಲಮ್ಮ ಕುಮಾರಕೊಪ್ಪ , ಆಶಾ ಕಾರ್ಯಕರ್ತೆ ರೇಖಾ, ಸೇವಾ ಪ್ರತಿನಿಧಿ ಬಸವಣ್ಣೆಮ್ಮ, ವಲಯ ಮೇಲ್ವಿಚಾರಕಿ ದೀಪಾ ಹಾಗೂ ಪವಿತ್ರ ಸೇರಿ ಒಕ್ಕೂಟದ ಪದಾಧಿಕಾರಿಗಳು , ತಂಡದ ಸದಸ್ಯರು , ಗ್ರಾಮಸ್ಥರು ಇದ್ದರು.

# ಕಳ್ಳತನ ತಡೆಗಟ್ಟುವ ಕುರಿತು ಜಾಗೃತಿ ಶಿಬಿರ



**ಬೆಳಗಾವಿ ವಾರ್ತೆ ನವಲಗುಂದ:** ಮನೆಗಳ್ಳತನ ಕೃತ್ಯ ತಡೆಗಟ್ಟಿ ಸಾರ್ವಜನಿಕರಲ್ಲಿ ವಿಶ್ವಾಸ ಮೂಡಿಸುವ ಉದ್ದೇಶದಿಂದ ಲಾಕ್ಡ್ ಹೌಸ್ ಬೀಟ್ ಸಿಸ್ಟಂ ರೂಪಿಸಲಾಗಿದೆ. ಈ ವ್ಯವಸ್ಥೆಯನ್ನು ನಿವಾಸಿಗಳು ಬಳಸಿಕೊಳ್ಳಬೇಕು ಎಂದು ಸಿಪಿಐ ರವಿಕುಮಾರ ಕಪ್ಪತ್ತನವರ ಹೇಳಿದರು.

ಸ್ಥಳೀಯ ಸಿದ್ಧಿವಿನಾಯಕ ಲಕ್ಷಿ ಪಾರ್ಕ ನಿವಾಸಿಗಳಿಗೆ ಪೊಲೀಸ್ ಇಲಾಖೆಯಿಂದ ಕಳ್ಳತನ ತಡೆಗಟ್ಟುವ ಕುರಿತು ಗಣಪತಿ–ಆಂಜನೇಯ ದೇವಸ್ಥಾನದಲ್ಲಿ ಏರ್ಪಡಿಸಿದ ಜಾಗೃತಿ ಶಿಬಿರದಲ್ಲಿ ಮಾತನಾಡಿದ ಅವರು ಕುಟುಂಬ ಸಮೇತ ಹೊರಗೆ ಹೋಗುವಾಗ ಬೆಲೆ ಬಾಳುವ ವಸ್ತು, ಹಣವನ್ನು ಜತೆಯಲ್ಲಿತೆಗೆದುಕೊಂಡು ಹೋಗುವುದು ಅಥವಾ ಬ್ಯಾಂಕ್ ಲಾಕರ್‌ನಲ್ಲಿಡಿ. ಮನೆಯಿಂದ ಹೊರ ಹೋಗುವಾಗ ಮನೆ ಬಾಗಿಲಿಗೆ ಡೋರ್ ಲಾಕ್ ಬೀಗ ಹಾಕಿ ಸಂಶಯಾಸ್ಪದ ವ್ಯಕ್ತಿ ಅಥವಾ ವಸ್ತುಗಳು ಕಂಡಾಗ ಠಾಣೆಗೆ ತಿಳಿಸಿ ಎಂದರು.

ಪಿಎಸ್‌ಐ ಜನಾರ್ಧನ ಭಟ್ರಳ್ಳಿ ಮಾತನಾಡಿ ಬ್ಯಾಂಕುಗಳಲ್ಲಿಹಣ ಕಟ್ಟುವಾಗ, ತೆಗೆಯುವಾಗ ಕಳ್ಳರು ನಿಮ್ಮ ಗಮನ ಬೇರೆ ಕಡೆ ಸೆಳೆದು ಹಣ ಲಪಾಟಿಸುವುದು. ಬೆಳ್ಳಿ ಬಂಗಾರ ಒಡವೆಗಳನ್ನು ಪಾಲಿಸ್ ಮಾಡುವುದು ಅಥವಾ ಕಡಿಮೆ ಬೆಲೆಗೆ ತೆಗೆದುಕೊಳ್ಳುವುದಾಗಲಿ ಮಾಡಿ ವಂಚನೆಗೋಳಗಾಬಾರದು ಎಂದು ತಿಳಿಹೇಳಿದರು

ಅಧ್ಯಕ್ಷ ನಿಂಗಪ್ಪ ಬಾರಕೇರ ಮಾತನಾಡಿ ಇತ್ತೀಚಿನ ದಿನಗಳಲ್ಲಿ ಹೆಚ್ಚುತ್ತಿರುವ ಮನೆಗಳ್ಳತನ ತಡೆಯಲು ಎಲ್ಲರೂ ನಮ್ಮ ನಮ್ಮ ಮನೆಗಳಿಗೆ ಸಿ ಸಿ ಕ್ಯಾಮರಾ ಅಳವಡಿಸಿ ಕಳ್ಳತನ ತಡೆಯಲು ಇಲಾಖೆಯೊಂದಿಗೆ ಸಹಕರಿಸೋಣ. ಜೊತೆಗೆ ಬೀಟ್ ಸಿಸ್ಟಂನ್ನು ಮೇಲಿಂದಮೇಲೆ ಪರಿಶೀಲಿಸಬೇಕು ಹಾಗೂ ಪಟ್ಟಣದಲ್ಲಿ ಪೊಲೀಸ್ ಇಲಾಖೆ ವತಿಯಿಂದ ಅಳವಡಿಸಿರುವ ಸಿ ಸಿ ಕ್ಯಾಮರಾಗಳನ್ನು ಅಚ್ಚುಕಟ್ಟಾಗಿ ನಿರ್ವಹಣೆ ಮಾಡಬೇಕು ಎಂದು ಪೊಲೀಸ್ ರಲ್ಲಿ ಮನವಿ ಮಾಡಿದರು

ದೇವಸ್ಥಾನದ ಉಪಾಧ್ಯಕ್ಷ ದಾವಲಸಾಬ್ ನಾಯ್ಕರ್, ಶೇಖರಪ್ಪ ಇನಾಮತಿ, ಮಲ್ಲಿಕಾರ್ಜುನ್ ಗಂಗನಗೌಡ, ರಾಮರೆಡ್ಡಿ ನೇಗಿಲಿ, ಆರ್ ಬಿ ಬಾಳನಗೌಡ್ರ, ಎಫ್ ಎಂ ಮುಳವಾಡ, ಬುದಪ್ಪ ಬಾಗಲಕೋಟೆ, ಪರಸುರಾಮ್ ಹಡಪದ ಸೇರಿ ನೂರಾರು ಮಹಿಳೆಯರು ಇದ್ದರು.

# ಧಾರವಾಡ: ಲವ್ ಜಿಹಾದ್‌ಗೆ ಹೆದರಿ ದಲಿತ ಬಾಲಕಿ ಆತ್ಮಹತ್ಯೆ; ರಾಜಿ ಸಂಧಾನಕ್ಕೆ ಯತ್ನ; ಗರಗ CPI ಅಮಾನತು





**ಬೆಳಗಾವಿ ವಾರ್ತೆ ಧಾರವಾಡ:** ಅಪ್ರಾಪ್ತ ಬಾಲಕಿಯೊಬ್ಬಳು ಲವ್ ಜಿಹಾದ್ ಗೆ ಹೆದರಿ ಆತ್ಮಹತ್ಯೆಗೆ ಶರಣಾಗಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಕರ್ತವ್ಯ ಲೋಪದ ಆರೋಪದಡಿ ಗರಗ ಸರ್ಕಲ್ ಸಿಪಿಐ ಶಿವಯೋಗಿ ಲೋಹಾರ್ ನನ್ನು ಅಮಾ ನತುಗೊಳಿಸಿ ಧಾರವಾಡ ಜಿಲ್ಲಾ ಪೊಲೀಸ್ ಎಸ್‌ಪಿ ಗುಂಜನ್ ಆರ್ಯ ಅವರು ಅಮಾನತು ಆದೇಶ ಹೊರಡಿಸಿದ್ದಾರೆ.

ಲವ್ ಜಿಹಾದ್ ಪ್ರಕರಣದಲ್ಲಿ ಪೊಲೀಸರು ರಾಜಿ ಸಂಧಾನ ಮಾಡಲು ಮುಂದಾಗಿದ್ದರು ಎಂಬ ಆರೋಪ ಕೇಳಿಬಂದಿತ್ತು. ಅಲ್ಲದೆ, ಈ ಪ್ರಕರಣದ ಹಿನ್ನೆಲೆಯಲ್ಲಿ ಅಪ್ರಾಪ್ತೆ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ ಎಂದು ಪೋಷಕರು ಆರೋಪಿಸಿದ್ದರು. ಲವ್ ಜಿಹಾದ್ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಈಗಾಗಲೇ ಇಬ್ಬರು ಆರೋಪಿಗಳು ನಯೀಮ್ ಬೇಗ್ ಜೋರಮ್ಮನವರ್ (25) ಮತ್ತು ಸೊಹೈಲ್ ಮುಲ್ಲಾ (22) ನನ್ನು ಬಂಧಿಸಿದ್ದಾರೆ.

ಲವ್ ಜಿಹಾದ್ ಪ್ರಕರಣ ಹಿನ್ನಲೆ ಬಜರಂಗ ದಳ ಕಾರ್ಯಕರ್ತರು ಪೊಲೀಸ್ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ಪ್ರತಿಭಟನೆ ನಡೆಸಿದ್ದರು.

# ಕಾಣೆಯಾದ ಮಹಿಳೆ ಹಾಗೂ ಅಪಹರಣಕ್ಕೊಳಗಾದ ಅಪ್ರಾಪ್ತ ಬಾಲಕಿ ಪತ್ತೆ ತಾಂತ್ರಿಕ ಸಾಕ್ಷ್ಯಗಳ ನೆರವಿನಿಂದ ಬೆಂಗಳೂರಿನಲ್ಲಿ ಶೋಧ; ಆರೋಪಿ ಬಂಧನ



**ಬೆಳಗಾವಿ ವಾರ್ತೆ ಬಳ್ಳಾರಿ:** ಬಳ್ಳಾರಿ ಮಹಿಳಾ ಪೊಲೀಸ್ ಠಾಣೆ ಹಾಗೂ ಮಾನವ ಕಳ್ಳಸಾಗಣೆ ತಡೆ ಘಟಕ (ಎಎಚ್‌ಟಿಯು) ಸಿಬ್ಬಂದಿ ಎರಡು ಪ್ರತ್ಯೇಕ ಪ್ರಕರಣಗಳಲ್ಲಿ ಶ್ಲಾಘನೀಯ ಕಾರ್ಯಾಚರಣೆ ನಡೆಸಿ, ಕಾಣೆಯಾಗಿದ್ದ ಮಹಿಳೆ ಹಾಗೂ ಅಪಹರಣಕ್ಕೊಳಗಾಗಿದ್ದ ಅಪ್ರಾಪ್ತ ಬಾಲಕಿಯನ್ನು ಬೆಂಗಳೂರಿನಲ್ಲಿ ಪತ್ತೆಹಚ್ಚುವಲ್ಲಿ ಯಶಸ್ವಿಯಾಗಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಓರ್ವ ಆರೋಪಿಯನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

2025ರ ಏಪ್ರಿಲ್ 24ರಂದು ಕೂಳಗಲ್ಲು ಗ್ರಾಮ ನಿವಾಸಿ ಸುಮಾರು 21 ವರ್ಷದ ಮಹಿಳೆ ಕಾಣೆಯಾಗಿದ್ದ ಕುರಿತು ಕುಟುಂಬಸ್ಥರು ನೀಡಿದ ದೂರಿನ ಮೇರೆಗೆ ಬಳ್ಳಾರಿ ಮಹಿಳಾ ಪೊಲೀಸ್ ಠಾಣೆಯಲ್ಲಿ ಅಪರಾಧ ಸಂಖ್ಯೆ 55/2025ರಡಿ ಪ್ರಕರಣ ದಾಖಲಾಗಿತ್ತು. ಪ್ರಕರಣದ ತನಿಖೆ ಕೈಗೊಂಡ ಪೊಲೀಸ್ ಇನ್ಸ್‌ಪೆಕ್ಟರ್ ರಮೇಶ್ ಕುಲಕರ್ಣಿ ನೇತೃತ್ವದ ತಂಡವು ಕರೆ ವಿವರ ದಾಖಲೆಗಳು (ಅಆಖ) ಹಾಗೂ ಇತರ ತಾಂತ್ರಿಕ ಸಾಕ್ಷ್ಯಗಳನ್ನು ಆಧರಿಸಿ ಮಹಿಳೆಯನ್ನು ಬೆಂಗಳೂರಿನಲ್ಲಿ ಪತ್ತೆಹಚ್ಚಿತು.

ತನಿಖೆಯ ವೇಳೆ ಮಹಿಳೆ ಪತಿಯೊಂದಿಗೆ ಉಂಟಾದ ಮನಸ್ತಾಪದ ಹಿನ್ನೆಲೆಯಲ್ಲಿ ಸ್ವಯಂಪ್ರೇರಿತವಾಗಿ ಮನೆ ಬಿಟ್ಟು ಬೆಂಗಳೂರಿಗೆ ತೆರಳಿ ಖಾಸಗಿ ಶಾಲೆಯಲ್ಲಿ ಶಿಕ್ಷಕಿಯಾಗಿ ಕೆಲಸ ಮಾಡುತ್ತಾ ಜೀವನ ಸಾಗಿಸುತ್ತಿದ್ದಳು ಎಂಬುದು ತಿಳಿದುಬಂದಿದೆ. ಬಳಿಕ ಆಕೆಯನ್ನು ಸುರಕ್ಷಿತವಾಗಿ ಕುಟುಂಬಸ್ಥರ ಸಮ್ಮುಖದಲ್ಲಿ ಪತಿ ಶಿವಕುಮಾರ್ ಅವರಿಗೆ ಒಪ್ಪಿಸಲಾಗಿದೆ.

ಇನ್ನೊಂದು ಪ್ರಕರಣದಲ್ಲಿ, 2025ರ ನವೆಂಬರ್ 4ರಂದು ಬಳ್ಳಾರಿ ನಗರದ ರಾಮಾಂಜನೇಯ ನಗರದಿಂದ ಅಪ್ರಾಪ್ತ ಬಾಲಕಿ ಅಪಹರಣಕ್ಕೊಳಗಾಗಿದ್ದ ಕುರಿತು ಮಹಿಳಾ ಪೊಲೀಸ್ ಠಾಣೆಯಲ್ಲಿ ಅಪರಾಧ ಸಂಖ್ಯೆ 169/2025ರಡಿ ಪ್ರಕರಣ ದಾಖಲಾಗಿತ್ತು. ಪಿಐ ರಮೇಶ್ ಕುಲಕರ್ಣಿ ಹಾಗೂ ಎಎಚ್‌ಟಿಯು ಸಿಬ್ಬಂದಿ ಜಂಟಿಯಾಗಿ ಕಾರ್ಯಾಚರಣೆ ನಡೆಸಿ, ತಾಂತ್ರಿಕ ಮಾಹಿತಿ ಮತ್ತು ಸಿಡಿಆರ್ ವಿಶ್ಲೇಷಣೆಯ ನೆರವಿನಿಂದ ಬಾಲಕಿಯನ್ನು ಬೆಂಗಳೂರಿನಲ್ಲಿ ಪತ್ತೆಹಚ್ಚಿದರು.

ಪತ್ತೆಯಾದ ಬಾಲಕಿಯನ್ನು ಅಗತ್ಯ ಕಾನೂನು ಪ್ರಕ್ರಿಯೆ ಪೂರ್ಣಗೊಳಿಸಿ ಬಾಲ ಮಂದಿರದ ವಶಕ್ಕೆ ಒಪ್ಪಿಸಲಾಗಿದ್ದು, ಪ್ರಕರಣ ಸಂಬಂಧ ಬಳ್ಳಾರಿಯ ಗೌತಮ್ ನಗರದ ನಿವಾಸಿ ಖಾದರ್ ಭಾಷ (22) ಎಂಬ ಆರೋಪಿಯನ್ನು ಬಂಧಿಸಲಾಗಿದೆ. ಆರೋಪಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಸುಮನ್ ಡಿ. ಪೆನ್ನೇಕರ್, ಐಪಿಎಸ್ ಅವರ ಮಾರ್ಗದರ್ಶನದಲ್ಲಿ ಮಹಿಳಾ ಪೊಲೀಸ್ ಠಾಣೆ ಮತ್ತು ಮಾನವ ಕಳ್ಳಸಾಗಣೆ ತಡೆ ಘಟಕದ ಸಿಬ್ಬಂದಿ ಕಾರ್ಯಾಚರಣೆ ಯಶಸ್ವಿಯಾಗಿ ನಡೆಸಿದ್ದು, ಸಾರ್ವಜನಿಕರಿಂದ ಪ್ರಶಂಸೆ ವ್ಯಕ್ತವಾಗಿದೆ.

# ಎಸ್‌ಐಆರ್ ವಿರೋಧಿ ಜಾಥಾಗೆ ಜೂ.17ರಂದು ಬಳ್ಳಾರಿಯಲ್ಲಿ ಚಾಲನೆ




**ಬೆಳಗಾವಿ ವಾರ್ತೆ ಬಳ್ಳಾರಿ:** ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ವಿರೋಧಿಸಿ ಜಾತ್ಯತೀತ ಪಕ್ಷಗಳು ಹಾಗೂ ಜನಪರ ಸಂಘಟನೆಗಳ ಒಕ್ಕೂಟ ಕರ್ನಾಟಕದ ವತಿಯಿಂದ ಜೂನ್ 17ರಂದು ಬಳ್ಳಾರಿಯಲ್ಲಿ ಜನಜಾಗೃತಿ ಜಾಥಾ ಹಮ್ಮಿಕೊಳ್ಳಲಾಗಿದೆ ಎಂದು ಎದ್ದೇಳು ಕರ್ನಾಟಕ ಸಂಘದ ಮುಖಂಡ ಸಿದ್ದಣ್ಣ ತಿಳಿಸಿದ್ದಾರೆ.

ನಗರದ ಪತಿಕ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಾಥಾವು ಸಂಜೆ 6 ಗಂಟೆಗೆ ಮಾತಿ ಸರ್ಕಲ್‌ನ ಬಸವಣ್ಣನವರ ಪ್ರತಿಮೆಗೆ ಮಾಲಾರ್ಪಣೆ ಮಾಡುವ ಮೂಲಕ ಆರಂಭವಾಗಿ, ರಾಯಲ್ ಸರ್ಕಲ್ ಮಾರ್ಗವಾಗಿ ಗಾಂಧಿ ಭವನದವರೆಗೆ ಸಾಗಲಿದೆ. ಬಳಿಕ ಬಹಿರಂಗ ಸಮಾವೇಶ ನಡೆಯಲಿದೆ ಎಂದರು.

ಎಸ್‌ಐಆರ್ ಪ್ರಕ್ರಿಯೆಯಿಂದ ಬಡವರು ಹಾಗೂ ಹಿಂದುಳಿದ ವರ್ಗದ ಜನರು ಮತದಾನದ ಹಕ್ಕು ಕಳೆದುಕೊಳ್ಳುವ ಅಪಾಯವಿದ್ದು, ಇದು ಸಂವಿಧಾನದ ಆಶಯಗಳಿಗೆ ವಿರುದ್ಧವಾಗಿದೆ ಎಂದು ಅವರು ಆರೋಪಿಸಿದರು. ಮತದಾರರ ಪಟ್ಟಿಯ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಕಾಪಾಡಬೇಕು ಹಾಗೂ ಸಾರ್ವಜನಿಕ ಪರಿಶೀಲನೆಗೆ ಅವಕಾಶ ನೀಡಬೇಕು ಎಂದು ಒತ್ತಾಯಿಸಿದರು.

ಜೂನ್ 13ರಿಂದ 18ರವರೆಗೆ ರಾಜ್ಯದ ವಿವಿಧ ಭಾಗಗಳಲ್ಲಿ ಜನಜಾಗೃತಿ ಜಾಥಾ ನಡೆಯಲಿದ್ದು, ಜೂನ್ 20ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಬೃಹತ್ ಪ್ರತಿರೋಧ ಸಮಾವೇಶ ಆಯೋಜಿಸಲಾಗಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಬಳ್ಳಾರಿ ಮಹಾನಗರ ಪಾಲಿಕೆಯ ಮಹಾಪೌರ ಪಿ. ಗಾದೆಪ್ಪ, ಸಂಗನಕಲ್ಲು ವಿಜಯಕುಮಾರ್, ಅಂಝುದ್, ಯೆರುಕುಳ ಸ್ವಾಮಿ, ವೀರೇಂದ್ರ, ದಿವಾಕರ್, ವಸಂತ್, ವೀಣಾ ಕುಮಾರಿ, ಅಯೂಬ್, ಅಮೀರ್ ಖಾನ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಬಳ್ಳಾರಿ ದೇವಿನಗರದಲ್ಲಿ ಸ್ವಉದ್ಯೋಗ ಪ್ರೇರಣಾ ಶಿಬಿರ: ಮಹಿಳೆಯರಿಗೆ ಕೌಶಲ್ಯ ತರಬೇತಿ

**ಬೆಳಗಾವಿ ವಾರ್ತೆ ಬಳ್ಳಾರಿ:** ಬಳ್ಳಾರಿ ತಾಲೂಕಿನ ಗಾಂಧಿನಗರ ವಲಯದ ದೇವಿನಗರ ಕಾರ್ಯಕ್ಷೇತ್ರದ ಬಸವನಕುಂಟೆ ಬಸವೇಶ್ವರ ದೇವಸ್ಥಾನದ ಸಮೀಪದಲ್ಲಿರುವ ಶ್ರೀ ಶಾಂತಿ ಜ್ಞಾನ ವಿಕಾಸ ಕೇಂದ್ರದಲ್ಲಿ ಸ್ವಉದ್ಯೋಗ ಪ್ರೇರಣಾ ಶಿಬಿರವನ್ನು ಆಯೋಜಿಸಲಾಯಿತು.

ಕಾರ್ಯಕ್ರಮದಲ್ಲಿ ರೂಟ್ ಸೈಡ್ ಸಂಸ್ಥೆಯ ಉಪನ್ಯಾಸಕರಾದ ಶ್ರೀಮತಿ ಸಿದ್ದಲಿಂಗಮ್ಮ ಅವರು ಸ್ವಉದ್ಯೋಗದ ಮಹತ್ವ, ಆರ್ಥಿಕ ಸ್ವಾವಲಂಬನೆ ಹಾಗೂ ಸಣ್ಣ ಉದ್ಯಮಗಳ ಮೂಲಕ ಆದಾಯ ಗಳಿಸುವ ಅವಕಾಶಗಳ ಕುರಿತು ಮಾಹಿತಿ ನೀಡಿದರು. ಇದೇ ವೇಳೆ ಸ್ವಉದ್ಯೋಗಕ್ಕೆ ಪೂರಕವಾಗುವ ಸೀರೆ ಕುಚ್ಚು ಕಟ್ಟುವ ತರಬೇತಿಯನ್ನು ಮಂಜುಳಾ ಅವರು ಪ್ರಾಯೋಗಿಕವಾಗಿ ಪ್ರದರ್ಶಿಸಿ ಮಹಿಳೆಯರಿಗೆ ತರಬೇತಿ ನೀಡಿದರು.

ಕಾರ್ಯಕ್ರಮದಲ್ಲಿ ತಾಲೂಕಿನ ಸಮನ್ವಯ ಅಧಿಕಾರಿ ಆಶಾ, ಸ್ಥಳೀಯ ಸೇವಾ ಪ್ರತಿನಿಧಿ ಭಾಗ್ಯಮ್ಮ ಹಾಗೂ ಶ್ರೀ ಶಾಂತಿ ಜ್ಞಾನ ವಿಕಾಸ ಕೇಂದ್ರದ ಸದಸ್ಯರು ಉಪಸ್ಥಿತರಿದ್ದು, ಶಿಬಿರದ ಪ್ರಯೋಜನ ಪಡೆದುಕೊಂಡರು. ಮಹಿಳೆಯರ ಸ್ವಾವಲಂಬನೆ ಮತ್ತು ಕೌಶಲ್ಯ ಅಭಿವೃದ್ಧಿಗೆ ಇಂತಹ ಕಾರ್ಯಕ್ರಮಗಳು ಸಹಕಾರಿಯಾಗಲಿವೆ ಎಂದು ಅಭಿಪ್ರಾಯ ವ್ಯಕ್ತಪಡಿಸಲಾಯಿತು.



# ಶಂಕರಬಂಡೆ ಈ ರಸ್ತೆ ಕಾಮಗಾರಿ ಯಾವಾಗ ಮುಗಿಯುತ್ತೆ



**ಬೆಳಗಾವಿ ವಾರ್ತೆ ಬಳ್ಳಾರಿ:** ತಾಲೂಕಿನ ಶಂಕರ ಬಂಡೆ ಗ್ರಾಮದ ಶಂಕರಲಿಂಗ ದೇವಾಲಯ ಮತ್ತು ಆಂಜನೇಯ ದೇವಾಲಯದ ಊರಿನ ಹೃದಯ ಭಾಗದ ಮುಖ್ಯರಸ್ತೆ ಅಂದಾಜು 1 ಕಿಲೋ ಮೀಟ ರ್ ರಸ್ತೆ ಕಾಮಗಾರಿ ನೆನೆಗುದಿಗೆ ಬಿದ್ದಿದೆ. ಸರಿ ಸುಮಾರು ಒಂದು ವರ್ಷದಿಂದ ಈ ಕಾಮಗಾರಿ ಆಮೆಗತಿಯಲ್ಲಿ ನಡೆಯುತ್ತಿದೆ. ವಾಹನಗಳ ಓಡಾಡು ವುದು ತುಂಬಾ ಕಠಿಣವಾಗಿದೆ & ಅಪಘಾತಕ್ಕೆ ಅನೇಕ ತುತ್ತಾಗುತ್ತಿದ್ದಾರೆ. ಸಂಬಂಧಪಟ್ಟ ಅಧಿಕಾ ರಿಗಳು ತ್ವರಿತ ಗತಿಯಲ್ಲಿ ಕಾಮಗಾರಿ ಪೂಣ ರ್ಗೊಳಿಸಲುಸಾರ್ವಜನಿಕರು ಒತ್ತಾಯಿಸಿ ದ್ದಾರೆ.

# ಆತ್ಮೀಯ ಸನ್ಮಾನ; ಅಭಿನಂದನೆ



**ಬೆಳಗಾವಿ ವಾರ್ತೆ ಹುಬ್ಬಳ್ಳಿ :** ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಸದಸ್ಯರು ಪ್ರೊ ಎಸ್ ಆರ್ ಕೆಂಚಣ್ಣವರ ಅವರ ಮನೆಗೆ ತೆರಳಿ ಹುಬ್ಬಳ್ಳಿಯಲ್ಲಿ ಶಿಕ್ಷಣ ಕ್ರಾಂತಿ ಮಾಡಿದ, ಖ್ಯಾತ ಪ್ರಾಧ್ಯಾಪಕರು, ಶಿಕ್ಷಣ ತಜ್ಞರು , ಶಿಕ್ಷಣ ಸಂಸ್ಥೆಗಳನ್ನು ಪ್ರಾರಂಭಿಸಿ, ಎಲ್ ಕೆ.ಜಿ ಯಿಂದ ಪಿಯುಸಿ ವರೆಗೆ ಸಾವಿರಾರು ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡುತ್ತಿರುವ, ಹಿರಿಯರು, ಮಾರ್ಗದರ್ಶಕರು, ಹಿತೈಸಿಗಳು, ಶಿಕ್ಷಣ ಪ್ರೇಮಿ ಪರಮ ಪೂಜ್ಯರಾದ ಪ್ರೊ ಜಿ. ವಿ. ವಳಸಂಗ ಅವರ ಸಮ್ಮುಖದಲ್ಲಿ ಧಾರವಾಡ ಜಿಲ್ಲಾ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಸಂಘದ 2026–2031 ಅವಧಿಯ ಪದಾಧಿಕಾರಿಗಳ ಚುನಾವಣೆಯಲ್ಲಿ ಸಂಘಟನಾ ಪ್ರಧಾನ ಕಾರ್ಯದರ್ಶಿಗಳಾಗಿ ಆಯ್ಕೆಯಾದ ಆತ್ಮೀಯರು, ಆಧ್ಯಾತ್ಮ ಜೀವಿಗಳು, ಉತ್ತಮ ಭಾಷಣಕಾರರು, ಹಿತೈಷಿಗಳಾದ, ಹುಬ್ಬಳ್ಳಿಯ ಪ್ರತಿಷ್ಠಿತ ಶ್ರೀ ಜಗದ್ಗುರು ಮೂರುಸಾವಿರಮಠ ವಿದ್ಯಾವರ್ಧಕ ಸಂಘದ ಪದವಿ ಪೂರ್ವ ಕಾಲೇಜಿನಲ್ಲಿ ಕನ್ನಡ ಉಪನ್ಯಾಸಕರಾಗಿ ಸೇವೆ ಸಲ್ಲಿಸುತ್ತಿರುವ ಪ್ರೊ ಶಾಂತಪ್ಪ ರಾಮಣ್ಣ ಕೆಂಚಣ್ಣವರ ಅವರಿಗೆ ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ, ಬಸವ ಪರಿಸರ ಸಂರಕ್ಷಣಾ ಸಮಿತಿಯ ವತಿಯಿಂದ ಶಾಲು, ಗ್ರಂಥ ನೀಡಿ, ಮಾಲಾರ್ಪಣೆ ಮಾಡಿ, ಶ್ರದ್ಧಾ, ಭಕ್ತಿಯಿಂದ ಗೌರವದಿಂದ ಆತ್ಮೀಯವಾಗಿ ಸನ್ಮಾನಿಸಿದರು. ಹುತ್ಪೂರ್ವಕವಾಗಿ ಅಭಿನಂದನೆಗಳನ್ನು ಸಲ್ಲಿಸಿದರು.

ಇವರ ಅವಧಿಯಲ್ಲಿ ಪದವಿ ಪೂರ್ವ ಕಾಲೇಜಿನಲ್ಲಿರುವ ಸಮಸ್ಯೆಗಳಿಗೆ, ಗುಣಮಟ್ಟದ ಶಿಕ್ಷಣ ನೀಡುವುದಕ್ಕೆ, ಸೂಕ್ತ ಪರಿಹಾರ, ಮಾರ್ಗದರ್ಶನ ಮಾಡಿ, ಸಂಘಟನಾತ್ಮಕ ಕಾರ್ಯ ಮಾಡಲಿ ಎಂದು ಶುಭ ಕೋರಿದರು. ಸೋಹನ ಸುರೇಶ ಹೊರಕೇರಿ, ಸುಜಯ ಸುರೇಶ ಹೊರಕೇರಿ, ಪ್ರೊ ಜಿ.ವಿ. ವಳಸಂಗ, ಸೌಮ್ಯಾ ಕೆಂಚಣ್ಣವರ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಕಾರ್ಯದರ್ಶಿ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ, ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಜಿಲ್ಲಾ ಘಟಕದ ಉಪಾಧ್ಯಕ್ಷ, ಕರ್ನಾಟಕ ವಚನ ಸಾಹಿತ್ಯ ಪರಿಷತ್‌ನ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ ಟ್ರಸ್ಟಿ, ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ , ಹನುಮಂತ ಟಿ., ಸುನೀತಾ ಮೇಟಿ, ಜ್ಯೋತಿ ಕೆಂಚಣ್ಣವರ, ಮಕ್ಕಳು , ಮುಂತಾದವರು ಇದ್ದರು.

# ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ: ಬಾಲಕಾರ್ಮಿಕರನ್ನು ದುಡಿಸಿ ಕೊಳ್ಳುವವರ ವಿರುದ್ಧ ಕಠಿಣ ಕ್ರಮ – ಸಿವಿಲ್ ನ್ಯಾಯಾಧೀಶೆ ಸವಿತಾ ಮುಕ್ಕಲ್




**ಬೆಳಗಾವಿ ವಾರ್ತೆ ಮೂಡಲಗಿ:** ಬಾಲಕಾರ್ಮಿಕ ಪದ್ಧತಿ ಸಮಾಜದ ಒಂದು ದೊಡ್ಡ ಪಿಡುಗಾಗಿದ್ದು, ಪ್ರತಿಯೊಬ್ಬರೂ ಇದರ ವಿರುದ್ಧ ಜಾಗೃತಿ ಮೂಡಿಸುವ ಕಾರ್ಯದಲ್ಲಿ ಕೈಜೋಡಿಸಬೇಕು. ಯಾರೂ ಕೂಡ 18 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳನ್ನು ದುಡಿಸಿಕೊಳ್ಳಬಾರದು. ಬಾಲಕಾರ್ಮಿಕರನ್ನು ಕೆಲಸಕ್ಕೆ ಬಳಸಿಕೊಂಡರೆ ಅವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಮೂಡಲಗಿ ಸಿವಿಲ್ ಹಾಗೂ ಜೆಎಂಎಫ್‌ಸಿ ನ್ಯಾಯಾಲಯದ ನ್ಯಾಯಾಧೀಶರಾದ ಶ್ರೀಮತಿ ಸವಿತಾ ನಿಂಗಪ್ಪ ಮುಕ್ಕಲ್ ಹೇಳಿದರು

ಪಟ್ಟಣದ ಅಲ್ಪಸಂಖ್ಯಾತರ ವಿದ್ಯಾರ್ಥಿ ವಸತಿ ನಿಲಯದಲ್ಲಿ ತಾಲೂಕು ಕಾನೂನು ಸೇವೆಗಳ ಸಮಿತಿ ಮೂಡಲಗಿ, ಕಾರ್ಮಿಕ ಇಲಾಖೆ ಮೂಡಲಗಿ/ ಗೋಕಾಕ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಕಾರ್ಮಿಕ ಇಲಾಖೆ ನಿರೀಕ್ಷಕ ಪಾಂಡುರಂಗ ಮಾವರಕರ ಮಾತನಾಡಿ, ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಜಾರಿಗೆ ತಂದಿರುವ ವಿವಿಧ ಕಾನೂನುಗಳ ಬಗ್ಗೆ ಸವಿಸ್ತಾರವಾಗಿ ಮಾಹಿತಿ ನೀಡಿದರು. 14 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳನ್ನು ಯಾವುದೇ ವೃತ್ತಿಯಲ್ಲಿ ದುಡಿಸಿಕೊಳ್ಳುವುದು ಕಾನೂನುಬಾಹಿರವಾಗಿದ್ದು, 14 ರಿಂದ 18 ವರ್ಷ ವಯಸ್ಸಿನ ಕಿಶೋರರನ್ನು ಅಪಾಯಕಾರಿ ಉದ್ಯೋಗಗಳಲ್ಲಿ ತೊಡಗಿಸಿಕೊಳ್ಳುವುದಕ್ಕೂ ಕಾನೂನಿನಲ್ಲಿ ನಿಷೇಧವಿದೆ ಎಂದು ತಿಳಿಸಿದರು.

ನ್ಯಾಯವಾದಿಗಳ ಸಂಘದ ಕಾರ್ಯದರ್ಶಿ ಅನಿಲ್ ಕೌಜಲಗಿ ಮಾತನಾಡಿ, ತಾಲೂಕು ಕಾನೂನು ಸೇವೆಗಳ ಸಮಿತಿಯ ಮೂಲಕ ಬಡವರು, ಕಾರ್ಮಿಕರು ಹಾಗೂ ಅಶಕ್ತ ವರ್ಗದ ಜನರಿಗೆ ಉಚಿತ ಕಾನೂನು ನೆರವು ನೀಡಲಾಗುತ್ತಿದೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು, 18 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳಿಗೆ ಯಾವುದೇ ಕಾರಣಕ್ಕೂ ವಾಹನಗಳನ್ನು ಚಾಲನೆ ಮಾಡಲು ನೀಡಬಾರದು. ನಿಯಮ ಉಲ್ಲಂಘಿಸಿದಲ್ಲಿ ವಾಹನ ನೀಡಿದ ಪಾಲಕರು ಅಥವಾ ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಹಾಗೂ ಭಾರೀ ದಂಡ ವಿಧಿಸಲಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಅಲ್ಪಸಂಖ್ಯಾತರ ವಸತಿ ನಿಲಯದ ಪ್ರಾಂಶುಪಾಲರು ವಹಿಸಿದ್ದರು.

ಈ ಸಂದರ್ಭದಲ್ಲಿ ನ್ಯಾಯವಾದಿಗಳ ಸಂಘದ ಅಧ್ಯಕ್ಷ ಆರ್ ಆರ್ ಭಾಗೋಜಿ ,ನ್ಯಾಯವಾದಿಗಳ ಸಂಘದ ಉಪಾಧ್ಯಕ್ಷ ಎಲ್ ಬಿ ವಡೇರ, ಜಂಟಿ ಕಾರ್ಯದರ್ಶಿ ಎಲ್ ಎಸ್ ಯಡ್ರಾಂವಿ,ಜಂಟಿ ಕಾರ್ಯದರ್ಶಿ ಎಸ್ ವೈ ಸನ್ನಕ್ಕಿ, ಆರ್ ಎಸ್ ತೋಳಮರ್ಡಿ, ಜ್ಯೋತಿ ಕುಡತೆ, ಸಿಡಿಪಿಒ ಯಲ್ಲಪ್ಪ ಗದಾಡಿ, ಪುರಸಭಾ ಮುಖ್ಯಾಧಿಕಾರಿ ತುಕಾರಾಮ ಮಾದರ, ಸೋಮನಾಥ ಇಜೇರಿ, ಲಾಡಸಾಬ ಶಿರಹಟ್ಟಿ, ರುದ್ರಪ್ಪ ಸಿದ್ದಣ್ಣವರ, ಆರ್ ಬಿ ಮಮದಾಪುರ ಎಸ್ ಎಲ್ ಪಾಟೀಲ ಪೆನಲ್ ವಕೀಲರು, ಹಾಗೂ ಶಾಲಾ ಶಿಕ್ಷಣ ಇಲಾಖೆ ಸಿಬ್ಬಂದಿ ವರ್ಗದವರು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಜುಗೂಳ ಗ್ರಾಮದಲ್ಲಿ ನೂತನ ಆಯುಷ್ಮಾನ್ ಆರೋಗ್ಯ ಕೇಂದ್ರ ಕಾಮಗಾರಿಗೆ ಚಾಲನೆ



ಮೋಳೆ: ಜುಗೂಳ ಗ್ರಾಮದಲ್ಲಿ ನೂತನ ಆಯುಷ್ಮಾನ ಆರೋಗ್ಯ ಕೇಂದ್ರ ಕಟ್ಟಡ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸುತ್ತಿರುವ ಮಾಜಿ ಗ್ರಾ. ಪಂ. ಅಧ್ಯಕ್ಷ ಕಾಕಾಸಾಬ ಪಾಟೀಲ ಮತ್ತು ಇತರ ಗಣ್ಯರ ಚಿತ್ರ.

**ಬೆಳಗಾವಿ ವಾರ್ತೆ ಮೋಳೆ:** ಶಾಸಕ ರಾಜು ಕಾಗೆ, ಚಿಕ್ಕೋಡಿ ಸಂಸದೆ ಪ್ರಿಯಾಂಕಾ ಜಾರಕಿಹೊಳಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಇವರ ವಿಶೇಷ ಪ್ರಯತ್ನದಿಂದ ಜುಗೂಳ ಗ್ರಾಮದಲ್ಲಿ ಸರ್ಕಾರಿ ಆಸ್ಪತ್ರೆಯ ಗ್ರಾಮಸ್ಥರು ಬಹುದಿನಗಳ ಬೇಡಿಕೆ ಈಗ ಈಡೇರಿದ್ದು, ರೂ. 65 ಲಕ್ಷ ಶಾಸಕರ ಅನುದಾನದಲ್ಲಿ ನೂತನ ಆಯುಷ್ಮಾನ್ ಆರೋಗ್ಯ ಮಂದಿರ ಕೇಂದ್ರದ ಕಟ್ಟಡ ನಿರ್ಮಾಣ ಕಾಮಗಾರಿಗೆ ಇಂದು ಚಾಲನೆ ನೀಡಲಾಗಿದೆ ಎಂದು ಕಾಗವಾಡ ಯುವ ಕಾಂಗ್ರೆಸ್ ಅಧ್ಯಕ್ಷ ಉಮೇಶ ಪಾಟೀಲ ತಿಳಿಸಿದ್ದಾರೆ.

ಅವರು ಶನಿವಾರ ದಿ. 13 ರಂದು ತಾಲೂಕಿನ ಜುಗೂಳ ಗ್ರಾಮದಲ್ಲಿ ಮಾತನಾಡುತ್ತಿದ್ದರು. ಕ್ಷೇತ್ರದಲ್ಲಿ ಸಾಕಷ್ಟು ಅಭಿವೃದ್ಧಿ ಕಾಮಗಾರಿಗಳನ್ನು ಮಾಡಿರುವ ಶಾಸಕರು, ಜುಗೂಳ ಗ್ರಾಮದ ಅಭಿವೃದ್ಧಿಗೆ ಅನುದಾನದ ಹೊಳೆಯನ್ನೇ ಹರಿಸಿದ್ದಾರೆ. ಆಯುಷ್ಮಾನ್ ಆರೋಗ್ಯ ಮಂದಿರ ನಿರ್ಮಿಸುವ ಮೂಲಕ ಈಗ ಗ್ರಾಮಸ್ಥರ ಬಹುದಿನಗಳ ಕನಸನ್ನು ಈಡೇರಿಸಿದ್ದಾರೆ. ಕಾಂಗ್ರೆಸ್ ಸರ್ಕಾರದ ಅಭಿವೃದ್ಧಿಪರ ಮತ್ತು ಜನಪರ ಕಾರ್ಯಗಳಿಂದಾಗಿ 2028 ರ ಚುನಾವಣೆಯಲ್ಲಿಯೂ ಕಾಂಗ್ರೆಸ್ ಅಧಿಕಾರಕ್ಕೆ ಬರಲಿದೆ ಎಂದರು.

ಈ ಸಮಯದಲ್ಲಿ ಮಾಜಿ ಗ್ರಾ.ಪಂ. ಅಧ್ಯಕ್ಷ ಕಾಕಾಸಾಬ ಪಾಟೀಲ, ಅನಿಲ ಕರೋಲೆ, ಅಕ್ಷಯ ಪಾಟೀಲ, ಅಮೀನ ನಂದಗಾವೆ, ಬಸವರಾಜ ನಂದಾಳೆ, ಮಹಾದೇವ ಕಾಂಬಳೆ, ಚಿದಾನಂದ ತಾರದಾಳೆ, ಸುರೇಶ ಪಾಟೀಲ, ದಯಾನಂದ ಮಿನಚೆ, ಶಿವಾನಂದ ಅಮ್ಮಣಗೆ, ಬಿಂದು ಅಥೋಕೆ, ಫಾರೂಖ ಕಳಾವಂತ, ಗುತ್ತಿಗೆದಾರ ವಿಜಯ ಚಿಂಚಲೆ ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

# ಅಖಿಲ ಭಾರತ ಗಾಣಿಗ ವಿದ್ಯಾ ಹಾಗೂ ಉದ್ಯೋಗವರ್ಧಕ ಟ್ರಸ್ಟ್‌ನಿಂದ ಪ್ರತಿಭಾ ಪುರಸ್ಕಾರ

# ಸಮಾಜದ ಅಭಿವೃದ್ಧಿಗೆ ಶಿಕ್ಷಣ ಅಗತ್ಯ: ಸದಾಶಿವಾನಂದ ಸ್ವಾಮೀಜಿ




**ಬೆಳಗಾವಿ ವಾರ್ತೆ ಗದಗ:** ಸಮಾಜದ ಅಭಿವೃದ್ಧಿ ಶಿಕ್ಷಣದಿಂದ ಮಾತ್ರ ಸಾಧ್ಯ. ಪಾಲಕರು ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಕೊಡಿಸಿ, ಉನ್ನತ ಗುರಿ ಸಾಧನೆಗೆ, ಉಜ್ವಲ ಭವಿಷ್ಯ ರೂಪಿಸಿಕೊಳ್ಳುವಿಕೆಗೆ ಪ್ರೋತ್ಸಾಹಿಸಬೇಕು ಎಂದು ಶಿವಾನಂದ ಬ್ರಹನ್ಮಠದ ಸದಾಶಿವಾನಂದ ಸ್ವಾಮೀಜಿ ಹೇಳಿದರು.

ಇಲ್ಲಿನ ವಿವೇಕಾನಂದ ನಗರದ ಗಾಣಿಗ ಸಮುದಾಯ ಭವನದಲ್ಲಿ ಶನಿವಾರ ಅಖಿಲ ಭಾರತ ಗಾಣಿಗ ವಿದ್ಯಾ ಹಾಗೂ ಉದ್ಯೋಗವರ್ಧಕ ಟ್ರಸ್ಟ್‌ನಿಂದ ಪ್ರತಿಭಾ ಪುರಸ್ಕಾರ, ನಿವೃತ್ತ ನೌಕರರಿಗೆ ಸನ್ಮಾನ, ವಾರ್ಷಿಕ ಸಭೆ ಹಾಗೂ ವಧು–ವರರ ಸಮಾವೇಶ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಸಮಾಜದ ಸರ್ವತೋಮುಖ ಅಭಿವೃದ್ಧಿಗೆ ಶಿಕ್ಷಣವೇ ಬೆನ್ನೆಲುಬು. ಇದು ವ್ಯಕ್ತಿಯ ಬೌದ್ಧಿಕ ಬೆಳವಣಿಗೆಗೆ ಮಾತ್ರವಲ್ಲದೆ, ಆರ್ಥಿಕ ಸ್ವಾವಲಂಬನೆ, ಆರೋಗ್ಯ ಮತ್ತು ಉತ್ತಮ ಸಂಸ್ಕೃತಿಯ ನಿರ್ಮಾಣಕ್ಕೆ ಅತ್ಯಂತ ಅವಶ್ಯಕವಾಗಿದೆ. ಜತೆಗೆ ಉತ್ತಮ ಸಮುದಾಯ ಭವನದಲ್ಲಿ ಮದುವೆ ಸಮಾರಂಭ ಮುಗಿದ ನಂತರ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ವಿದ್ಯಾರ್ಥಿಗಳಿಗೆ ಕೋಚಿಂಗ್ ಕ್ಲಾಸ್ ಆರಂಭಿಸಬೇಕು. ಇದರಿಂದ ಸಮಾಜದ ಮಕ್ಕಳಿಗೆ ಉತ್ತಮ ತರಬೇತಿ ನೀಡಿದಂತೆ ಆಗುತ್ತದೆ. ಸಮಾಜದ ನಾಯಕರು ಸೇರಿಕೊಂಡು ಬಡ ಮಕ್ಕಳ ಶಿಕ್ಷಣಕ್ಕೆ ಉತ್ತಮ ಶಾಲೆಯಲ್ಲಿ ಕಲಿಯಲು ಅವಕಾ ಶ ನೀಡುವ ಕೆಲಸವನ್ನು ಮಾಡಬೇಕು ಎಂದು ಸಮಾಜದ ಮುಖಂಡರಿಗೆ ಸಲಹೆ ನೀಡಿದರು.

**ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡಿ:**

ನಿವೃತ್ತ ಡಿಡಿಪಿಐ ಐ.ಬಿ.ಬೆನಕೊಪ್ಪ ಮಾತನಾಡಿ, ಎಲ್ಲರೂ ಒತ್ತಡದಲ್ಲಿಯೇ ಜೀವನ ಕಳೆಯುತ್ತಿದ್ದಾರೆ. ಆಧುನಿಕ ಬದುಕಿನ ಜೀವನ ಶೈಲಿಗೆ ಅಂಟಿಕೊಂಡು ಮಾನಸಿಕ ನೆಮ್ಮದಿ ಕಳೆದುಕೊಂಡಿದ್ದಾರೆ. ಇದರಿಂದಾಗಿ ಕೆಲವರಿಗೆ ಜೀವನದಲ್ಲಿ ಜಿಗುಪ್ಸೆ ಉಂಟಾಗುತ್ತದೆ. ಯುವ ಜನತೆಗೆ ಸುಜ್ಞಾನದ ಅರಿವಿಲ್ಲದೆ ದಾರಿ ತಪ್ಪುತ್ತಿದ್ದಾರೆ. ಪಾಲಕರು ತಮ್ಮ ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡಿ ಬೆಳೆಸಿದಾಗ ಮಾತ್ರ ಆರೋಗ್ಯಕರ ಸಮಾಜ ನಿರ್ಮಾಣ ಸಾಧ್ಯ ಎಂದು ಅಭಿಪ್ರಾಯಪಟ್ಟರು.

ಮಕ್ಕಳು ಉತ್ತಮ ನಾಗರಿಕರಾಗಿ ರೂಪುಗೊಳ್ಳಲು ಅವರಿಗೆ ತಳಪಾಯದಲ್ಲಿ ಉತ್ತಮ ಶಿಕ್ಷಣ ಕೊಡಿಸಬೇಕು. ಯಾವ ಮಗುವು ಸಹ ದಡ್ಡವಿಲ್ಲ ಹಾಗೂ ಅಂಕಗಳಿಸಿದ ಮಾತ್ರಕ್ಕೆ ಅವನು ತುಂಬಾ ಜಾಣ ಅನ್ನೊದನ್ನು ಮೊದಲು ತೆಗೆದು ಹಾಕಿ. ಎಲ್ಲ ಮಕ್ಕಳಲ್ಲಿ ತನ್ನದೇಯಾದ ಪ್ರತಿಭೆ ಇರುತ್ತದೆ. ಶಿಕ್ಷಕರು ಮತ್ತು ತಂದೆ–ತಾಯಂದಿರು ಮಕ್ಕಳ ಉತ್ತಮ ಶಿಕ್ಷಣಕ್ಕೆ ಹೆಚ್ಚು ಒತ್ತು ಕೊಡಬೇಕು ಎಂದರು.

ಭಾರತೀಯ ಅರಣ್ಯ ಸೇವೆಯಲ್ಲಿ ರಾಷ್ಟ್ರಕ್ಕೆ ಪ್ರಥಮ ಸ್ಥಾನ ಪಡೆದ ಬಸವರಾಜ ಕೆಂಪವಾಡ ಮಾತನಾಡಿ, ಪ್ರತಿಯೊಬ್ಬರೂ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿದರೆ ಮುಂದಿನ ದಿನಗಳಲ್ಲಿ ಆಸ್ತಿ ಗೌರವ ತಾನಾಗಿಯೇ ಬರುತ್ತದೆ. ಉತ್ತಮ ಅಂಕ ಪಡೆದರೆ ಮುಂದಿನ ದಿನಗಳಲ್ಲಿ ಉನ್ನತ ಸ್ಥಾನ ಪಡೆಯಲು ಸಾಧ್ಯವಾಗುತ್ತದೆ.

ಸಮಾಜಕ್ಕೆ ಏನಾದರೂ ಕೊಡುಗೆ ನೀಡುವ ಕೆಲಸವನ್ನು ಮಾಡಬೇಕು. ಯಾವುದೇ ಕ್ಷೇತ್ರದಲ್ಲಿ ಸಾಧನೆ ಮಾಡಬೇಕು. ಪೋಷಕರು ಯಾವುದೇ ರೀತಿಯ ಒತ್ತಡ ಹಾಕದೆ ಅವರ ಆಸಕ್ತಿ ಅನುಸಾರವಾಗಿ ಶಿಕ್ಷಣ ಪಡೆದರೆ ಸಾಧನೆ ಮಾಡಲು ಸಾಧ್ಯವಾಗುತ್ತದೆ. ಮಕ್ಕಳಿಗೆ ಪಾಲಕರ ಪ್ರೋತ್ಸಾಹ ನೀಡಿದರೆ ಮಕ್ಕಳು ಉತ್ತಮ ಶಿಕ್ಷಣ ಪಡೆಯಲು ಸಾಧ್ಯವಾಗುತ್ತದೆ ಎಂದರು.

ಜಿಲ್ಲಾ ಗಾಣಿಗ ಸಮಾಜದ ಅಧ್ಯಕ್ಷ ಬಸವರಾಜ ಬಿಂಗಿ ಮಾತನಾಡಿ, ಕಳೆದ ಹತ್ತು ವರ್ಷಗಳಿಂದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಮಾಡಲಾಗುತ್ತದೆ. ಒಂದೇ ವೇದಿಕೆಯಲ್ಲಿ ಎಲ್ಲಾ ವಿದ್ಯಾರ್ಥಿಗಳು ಸೇರುವ ಉದ್ದೇಶದಿಂದ ಇಂತಹ ಕಾರ್ಯಕ್ರಮ ಮಾಡಲಾಗುತ್ತಿದೆ. ಸಂಘದಿಂದ ವಿದ್ಯಾರ್ಥಿಗಳಿಗೆ ಗೌರವಧನವನ್ನು ನೀಡಲಾಗುತ್ತದೆ. ವಿದ್ಯಾರ್ಥಿಗಳು ಸರಿಯಾದ ಗುರಿ ಇಟ್ಟುಕೊಂಡರೆ ಮಾತ್ರ ಗುರಿ ಮುಟ್ಟಲು ಸಾಧ್ಯವಾಗುತ್ತದೆ. ಗಾಣಿಗ ಸಮಾಜದ ವಿದ್ಯಾರ್ಥಿಗಳು ಉನ್ನತ ಮಟ್ಟದ ಗುರಿ ಮುಟ್ಟುವ ಕೆಲಸವನ್ನು ಮಾಡಬೇಕು ಎಂದು ಸಲಹೆ ನೀಡಿದರು.

ಇದೇ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಉತ್ತಮ ಅಂಕ ಪಡೆದ ಸುಮಾರು 135 ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಹಾಗೆ ಭಾರತೀಯ ಅರಣ್ಯ ಸೇವೆಯಲ್ಲಿ ರಾಷ್ಟ್ರಕ್ಕೆ ಪ್ರಥಮ ಸ್ಥಾನ ಪಡೆದ ಬಸವರಾಜ ಕೆಂಪವಾಡ ಅವರನ್ನು ಸನ್ಮಾನಿಸಲಾಯಿತು. ಗೌರವಾಧ್ಯಕ್ಷ ಷಣ್ಮುಖಪ್ಪ ಬಡ್ನಿ, ಕಟ್ಟಡ ಸಮಿತಿ ಹಾಗೂ ಜಿಪಂ ಮಾಜಿ ಅಧ್ಯಕ್ಷ ನಿಂಗಪ್ಪ ಕೆಂಗಾರ, ಜಿಲ್ಲಾ ಗಾಣಿಗ ಸಮಾಜದ ಉಪಾಧ್ಯಕ್ಷ ಬಿ.ಬಿ. ಐನಾಪೂರ, ಗಾಣಿಗ ಸಮಾಜದ ಮುಖಂಡ ಅಶೋಕ ಮಂದಾಲಿ, ಸಿದ್ದು ಪಾಟೀಲ, ಅಖಿಲ ಭಾರತ ಗಾಣಿಗ & ಉದ್ಯೋಗವರ್ಧಕ ಟ್ರಸ್ಟ್ ಪದಾಧಿಕಾರಿಗಳಾದ ಷಣ್ಮುಖಪ್ಪ ಬಡ್ನಿ, ಮುರುಘರಾಜೇಂದ್ರ ಬಡ್ನಿ, ಸುರೇಶ ಮರಳಪ್ಪನವರ, ಎಸ್.ವಿ.ಪವಾಡಿಗೌಡ್ರ, ಗಿರಿಯಪ್ಪ ಅಸೂಟಿ, ಗಂಗಾಧರ ಗಾಣಿಗೇರ, ರಮೇಶ ಮಂದಾಲಿ, ಬಿ.ಎಸ್. ವಡವಟ್ಟಿ, ದಶರಥ ಗಾಣಿಗೇರ, ಬಸವರಾಜ ಸುಂಕದ, ಫಕೀರಪ್ಪ ಸಿಂಧಗಿ, ಹಾಲಪ್ಪ ಬಣವಿ, ಅಮರೇಶ ಹಾದಿ, ಶ್ರೀಕಾಂತ ಲಕ್ಕುಂಡಿ, ತೋಟಪ್ಪ ಗಾಣಿಗೇ ರ, ಐ.ಎಂ. ಕಿರೇಸೂರ, ಬಸವಂ ತಪ್ಪ ನವಲಳ್ಳಿ, ಸಂದೀಪ ಬೆಳವಟಗಿ, ಬಸವ ರಾಜ ನಲವಗುಂದ, ಜಗದೀಶ ಬೆಳವಟ ಗಿ, ಶಿವಣ್ಣ ಹಿಟ್ನಳ್ಳಿ, ಪುಲಿಕೇಶ ಗೌಡ ಪಾಟೀಲ, ಪ್ರಕಾಶ ಮುಧೋಳ, ಸೋಮ ನಗೌಡ ಪಾಟೀಲ, ಎಚ್.ಬಿ.ಕೊರಗಲ್ಲ ಸೇರಿದಂತೆ ಸಮಾಜದ ಮುಖಂಡರು ಇದ್ದರು.

# ಡಾ. ಸುರೇಶ ಕಾಗಲ್ಕರ್ ಅವರಿಗೆ ಪ್ರೈಡ್ ಆಫ್ ಕರ್ನಾಟಕ ಪ್ರಶಸ್ತಿ



**ಬೆಳಗಾವಿ ವಾರ್ತೆ ವಿಜಯಪುರ:** ಇತ್ತೀಚೆಗೆ ಬೆಂಗಳೂರಿನ ವಿಶ್ವವಿದ್ಯಾಲಯ ಆವರಣದಲ್ಲಿ ನಡೆದ ರಾಜ್ಯಮಟ್ಟದ ಕರ್ನಾಟಕ ಮೀಡಿಯಾ ಕ್ಲಬ್ ವತಿಯಿಂದ ಹಮ್ಮಿಕೊಂಡಿದ್ದ ಸಮಾರಂಭದಲ್ಲಿ ವಿಜಯಪುರದ ಪ್ರಸಿದ್ಧ ಮೂತ್ರಪಿಂಡ ತಜ್ಞ ಡಾ. ಸುರೇಶ ಕಾಗಲ್ಕರ್ ಅವರಿಗೆ ರಾಜ್ಯಮಟ್ಟದ "ಪ್ರೈಡ್ ಆಫ್ ಕರ್ನಾಟಕ "ಪ್ರಶಸ್ತಿಯನ್ನು ಪ್ರದಾನ ಮಾಡಲಾಯಿತು.

ಸಿನಿಮಾ ನಟ ಚೇತನ ಅಹಿಂಸ ಹಾಗೂ ಪ್ರಸಿದ್ಧ ವೈದ್ಯ ಪದ್ಮ ಪ್ರಕಾಶ ಹಾಗೂ ತಂಡದ ಅಧ್ಯಕ್ಷ ರಮೇಶ ಎಸ್.ಜಿ ಪ್ರಶಸ್ತಿ ನೀಡಿ ಸನ್ಮಾನ ಮಾಡಿದರು.

ವೇದಿಕೆ ಮೇಲೆ ಲೋಕಸಭಾ ಸದಸ್ಯರಾದ ಪಿ.ಸಿ ಮೋಹನ್ ಹಾಗೂ ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್. ಅಶೋಕ, ಚಲನಚಿತ್ರ ನಟ ಚೇತನ ಅಹಿಂಸ ಇನ್ನಿತರರು ಭಾಗವಹಿಸಿದ್ದರು. ರಾಜ್ಯದ ವಿವಿಧ ಕಡೆಗಳಿಂದ 2 ನೂರಕ್ಕೂ ಹೆಚ್ಚು ವಿವಿಧ ಗಣ್ಯ ವ್ಯಕ್ತಿಗಳು ಭಾಗವಹಿಸಿದ್ದರು. ಪ್ರಸ್ತುತ ಡಾ. ಸುರೇಶ ಅವರು ಅಲಮೀನ್ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಯುರಾಲಜಿ ವಿಭಾಗದ ಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಬಹುಮುಖ ಪ್ರತಿಭೆ ಯುಳ್ಳ ಅವರು ಸಾಹಿತ್ಯ ಸಂಸ್ಕೃತಿ, ಭಾರತಿಯ ವೈದ್ಯಕೀಯ ಸಂಘದ ರಾಜ್ಯದ ಚೇರ್ಮನ್ ರಾಗಿ ಕೆಲಸ ಮಾಡುತ್ತಿದ್ದಾರೆ. ವೈದ್ಯರುಗಳ ತಂಡ , ಗೆಳೆಯರ ತಂಡ ಹಾಗೂ ಅಲ ಅಮೀನ್ ವೈದ್ಯಕೀಯ ಕಾಲೇಜಿನ ಸಿಬ್ಬಂದಿ ತಂಡ ಅಭಿನಂದಿಸಿದ್ದಾರೆ.

# ಹೆಣ್ಣು ಮಕ್ಕಳಿಗೆ ಎಚ್.ಪಿ.ವ್ಹಿ ಲಸಿಕೆ

**ಬೆಳಗಾವಿ ವಾರ್ತೆ ಬಾಗಲಕೋಟೆ:** ಬಾಗಲಕೋಟೆ ಜಿಲ್ಲೆಯಲ್ಲಿರುವ ಎಲ್ಲ 14 ರಿಂದ 15 ವರ್ಷದ ಒಳಗೆ ಇರುವ ಹೆಣ್ಣು ಮಕ್ಕಳಿಗೆ ಗರ್ಭಕಂಠದ ಕ್ಯಾನ್ಸರ್ ತಡೆಗಟ್ಟಲು ಎಚ್.ಪಿ.ವ್ಹಿ ಲಸಿಕೆಯನ್ನು ನಿಮ್ಮ ಹತ್ತಿರದ ಸಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ತಪ್ಪದೇ ಹಾಕಿಸಿಕೊಳ್ಳುವಂತೆ ಜಿಲ್ಲಾಧಿಕಾರಿ ಮನವಿ ಮಾಡಿಕೊಂಡಿದ್ದಾರೆ. ಈ ಲಸಿಕೆ ತುಂಬಾ ಸುರಕ್ಷಿತವಾಗಿದ್ದು, ಈ ಲಸಿಕೆ ಉಚಿವಾಗಿರುತ್ತದೆ.

ಲಸಿಕೆ ಹಾಕಿಸಿಕೊಳ್ಳುವ ಹೆಣ್ಣು ಮಕ್ಕಳು 14ನೇ ವರ್ಷದ ಹುಟ್ಟು ಹಬ್ಬ ಆಗಿರಬೇಕು. 15ನೇ ವರ್ಷದ ಹುಟ್ಟು ಹಬ್ಬ ಆಗಿರಬಾರದು. ಅಂತಹ ಹೆಣ್ಣು ಮಕ್ಕಳು ಲಸಿಕೆ ಹಾಕಿಸಿಕೊಳ್ಳಬಹುದಾಗಿದೆ.

ಆದ್ದರಿಂದ ಎಲ್ಲ ಸರಕಾರಿ, ಖಾಸಗಿ, ಅನುದಾನಿತ , ಅನುದಾಹ ರಹಿತ ಹಾಗೂ ವಸತಿ ಶಾಲೆಗಳ ಮಕ್ಕಳಿಗೆ ಲಸಿಕೆ ಹಾಕಿಸಲು ಹಾಗೂ ಸಂಬಂಧಪಟ್ಟ ಶಿಕ್ಷಕರು ಯಾವುದೇ ಮಗು ಲಸಿಕೆಯಿಂದ ವಂಚಿತರಾಗದಂತೆ ನೋಡಿಕೊಳ್ಳಲು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001